MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com Yuva Marga yuva_marga_

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 109 | ಶನಿವಾರ : 14-02-2026 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 109 | SATURDAY : 14-02-2026 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಎಸ್‌ಎಸ್‌ಎಲ್‌ಸಿ ಪರೀಕ್ಷಾ ಫಲಿತಾಂಶ ಸುಧಾರಣೆಗೆ ಕ್ರಮವಹಿಸಲು ಜಿಲ್ಲಾಧಿಕಾರಿ ನಿತೀಶ್ ಕೆ. ಸೂಚನೆ

ಯುವಮಾರ್ಗ ಸುದ್ದಿ

**ರಾಯಚೂರು ಫೆ,13–** ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಫಲಿತಾಂಶ ಸುಧಾರಿಸಿ, ರಾಜ್ಯದಲ್ಲಿ ರಾಯಚೂರು ಜಿಲ್ಲೆಯು ಉತ್ತಮ ಸ್ಥಾನ ಕಾಯ್ದುಕೊಳ್ಳುವ ಹಾಗೆ ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಸಂಬಂಧಿಸಿದ ಅಧಿಕಾರಿಗಳು ತಮ್ಮ ಜವಾಬ್ದಾರಿ ಅರಿತು ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ನಿತೀಶ್ ಕೆ. ಅವರು ಹೇಳಿದರು.

ಫೆ.12ರ ಗುರುವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಫಲಿತಾಂಶ ಸುಧಾರಣೆಗಾಗಿ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಫಲಿತಾಂಶದ ಪ್ರಮಾಣ ಹೆಚ್ಚಿಸುವಲ್ಲಿ ಶಿಕ್ಷಕರ ಶ್ರಮ ಬಹಳ ಪ್ರಮುಖವಾಗಿರುತ್ತದೆ. ಕಲಿಕೆಯಲ್ಲಿ ಹಿಂದು



ಳಿದ ಮಕ್ಕಳನ್ನು ಗುರುತಿಸಿ ವಿಶೇಷ ಗಮನಹರಿಸಿದಾಗ ಸಹಜವಾಗಿ ಉತ್ತಮ ಫಲಿತಾಂಶ ದೊರೆಯುತ್ತದೆ. ಮಕ್ಕಳ ಶೈಕ್ಷಣಿಕ, ಕೌಟುಂಬಿಕ ವಾತಾವರಣ ಸರಿಯಾಗಿಲ್ಲ ಎನ್ನುವಂತಹ ಬಾಲಿಶ ಕಾರಣಗಳನ್ನು ಹೇಳದೇ ಮಕ್ಕಳ ಕಲಿಕೆಗೆ ಪೂರಕ ವಾತಾವರಣ ನಿರ್ಮಿಸುವ ಹೊಣೆಗಾರಿಕೆ ಶಿಕ್ಷಕರ ಮೇಲಿದೆ ಎಂದು ಅವರು ತಿಳಿಸಿದರು.

ಪೂರ್ವಸಿದ್ಧತಾ ಪರೀಕ್ಷೆಗಳ ಫಲಿತಾಂಶದ ಆಧಾರದ ಮೇಲೆ, ಕಡಿಮೆಅಂಕ ಗಳಿಸಿದ ವಿದ್ಯಾರ್ಥಿಗಳ ಕಡೆಗೆ ಶಿಕ್ಷಕರು ವಿಶೇಷ ಗಮನ ಹರಿಸಬೇಕು. ಶೇ.40ಕ್ಕಿಂತ ಕಡಿಮೆ ಫಲಿತಾಂಶ ಬಂದಿರುವ ಶಾಲೆಗಳ ಮೇಲೆ ಹೆಚ್ಚಿನ ನಿಗಾ ವಹಿಸಿ, ಅಲ್ಲಿನ ಬೋಧನಾ ಕ್ರಮಗಳಲ್ಲಿ ಸುಧಾರಣೆ ತರಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಈ ವೇಳೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಮಾತನಾಡಿ, ವಾರ್ಷಿಕ ಪರೀಕ್ಷೆಗೆ ವಿದ್ಯಾರ್ಥಿಗಳನ್ನು ಸನ್ನದ್ಧಗೊಳಿಸಲು ಪೂರಕ ಬೋಧನೆ ಮತ್ತು ಪುನರಾವರ್ತನೆಗೆ ಆದ್ಯತೆ ನೀಡಬೇಕು. ಅಲ್ಲದೆ ಹಿಂದುಳಿದ ವಿದ್ಯಾರ್ಥಿಗಳನ್ನು ಶಿಕ್ಷಕರು ದತ್ತು ಪಡೆದು ವೈಯಕ್ತಿಕ ಮಾರ್ಗದರ್ಶನ ನೀಡುವ ಜೊತೆಗೆ ಪರೀಕ್ಷಾ ದೃಷ್ಟಿಯಿಂದ ಪ್ರಮುಖವಾಗಿರುವ ವಿಷಯಗಳ ಬಗ್ಗೆ ಹೆಚ್ಚಿನ ತರಬೇತಿ ನೀಡಬೇಕೆಂದರು.

ಇದೇ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಡಿ.ಬಡಿಗೇರ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಿಆರ್.ಪಿ, ಬಿಆರ್ ಪಿ ಸೇರಿದಂತೆ ವಿವಿಧ ಶಾಲೆಯ ಮುಖ್ಯಗುರುಗಳು ಇದ್ದರು.

## ಕುತೂಹಲ ಮೂಡಿಸಿದ ಸಿಎಂ–ಡಿಸಿಎಂ ನಡೆ ಸಿಎಂ ಬದಲಾವಣೆ ಕಾಲ ಸನ್ನಿಹಿತ..?

**ಬೆಂಗಳೂರು, ಫೆ.13–** ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ದೆಹಲಿ ಪ್ರವಾಸದಿಂದ ವಾಪಾಸ್ ಬಂದ ಬಳಿಕವೂ ರಾಜ್ಯದಲ್ಲಿ ಅಧಿಕಾರ ಹಂಚಿಕೆಯ ಚರ್ಚೆಗಳು ಮತ್ತೊಂದು ಮಗ್ಗುಲು ಬದಲಿಸಿದೆ.

ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಬೇಕು ಎಂದು ವಿಧಾನ ಪರಿಷತ್ ಸದಸ್ಯ ಚನ್ನರಾಜಹಟ್ಟಿಹೊಳಿ ಹೇಳಿದರೆ, ಕೊಪ್ಪಳ ಕ್ಷೇತ್ರದ ಶಾಸಕ ರಾಘವೇಂದ್ರ ಹಿಟ್ನಾಳ್, ಸಿದ್ದರಾಮಯ್ಯ ಅವರೇ ಐದು ವರ್ಷ ಮುಖ್ಯಮಂತ್ರಿಯಾಗಿ ಮುಂದುವರೆಯಲಿದ್ದಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಈ ನಡುವೆ ಕಾಂಗ್ರೆಸ್ ನಲ್ಲೂ ರೆಸಾರ್ಟ್ ರಾಜಕೀಯ ಶುರುವಾಗಲಿದೆ. ಗೋವಾದ ರೆಸಾರ್ಟ್‌ನಲ್ಲಿ ಕಾಂಗ್ರೆಸ್‌ನ ಪ್ರಭಾವಿ ನಾಯಕರೊಬ್ಬರು 50ಕ್ಕೂ ಹೆಚ್ಚು ರೂಮ್‌ಗಳನ್ನೂ ಕಾಯ್ದಿರಿಸಿದ್ದಾರೆ ಎಂಬ ವದಂತಿಯೂ ಹರಿದಾಡಿತ್ತು. ಆದರೆ ಅದನ್ನು ತಳ್ಳಿ ಹಾಕಲಾಗಿದೆ.

ರಾಜಕೀಯ ಭಿನ್ನರಾಗಗಳ ಮಧ್ಯೆ ಮುಖ್ಯಮಂತ್ರಿ




ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಒಂದೇ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರೂ ಇಬ್ಬರ ನಡುವೆ ಅಷ್ಟೇನೂ ಮಾತುಕತೆ ನಡೆಯಲಿಲ್ಲ. ಒಬ್ಬರಿಗೊಬ್ಬರು ಔಪಚಾರಿಕವಾಗಿ ಮಾತುಕತೆ ನಡೆಸಿದರಾದರೂ, ಮೊದಲಿನ ಅನ್ಯೋನ್ಯತೆ ಕಂಡು ಬರಲಿಲ್ಲ. ಇಬ್ಬರು ತಮ್ಮ ಪಾಡಿಗೆ ತಾವು ಅನ್ಯಮನಸ್ಕರಾಗಿ ವೇದಿಕೆಯಲ್ಲಿ ಕಾಣಿಸಿಕೊಂಡರು.

ಈ ಮೊದಲು ಡಿ.ಕೆ.ಶಿವಕುಮಾರ್ ಅವರೇ ಮುಂದಾಗಿ ಸಿದ್ದರಾಮಯ್ಯ ಅವರನ್ನು ಮಾತನಾಡಿಸುತ್ತಾ, ಕಾರ್ಯಕ್ರಮವನ್ನು ಚೇತೋಹಾರಿಯಾಗಿಡಲು ಯತ್ನಿಸುತ್ತಿದ್ದರು. (2ನೇ ಪುಟಕ್ಕೆ>)

## ರಾಯಚೂರಿನ ಘನತ್ಯಾಜ್ಯ ಸಂಪನ್ಮೂಲ ಪುನರ್ಬಳಕೆ ನಿರ್ವಹಣಾ ಘಟಕದ ಸ್ಥಳಕ್ಕೆ ಪ್ರಾದೇಶಿಕ ಆಯುಕ್ತರು ಭೇಟಿ



ಯುವಮಾರ್ಗ ಸುದ್ದಿ

**ರಾಯಚೂರು ಫೆ,13–** ರಾಯಚೂರು ಜಿಲ್ಲಾ ಪ್ರವಾಸದಲ್ಲಿದ್ದ ರಾಯಚೂರು ಮಹಾನಗರ ಪಾಲಿಕೆಯ ಆಡಳಿತಾಧಿಕಾರಿಗಳು ಆಗಿರುವ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್ ಅವರು ಫೆ.11ರಂದು ಯಕ್ಲಸಾಪೂರ ಬಳಿಯಲ್ಲಿರುವ ರಾಯಚೂರಿನ ಘನತ್ಯಾಜ್ಯ ಸಂಪನ್ಮೂಲ ಪುನರ್ಬಳಕೆ ನಿರ್ವಹಣಾ ಘಟಕಕ್ಕೆ ಭೇಟಿ ನೀಡಿದರು.ಜೆಸಿಬಿ ಮತ್ತು ಇನ್ನಿತರ ಯಂತ್ರಗಳ ಮೂಲಕ ಬಿರುಸಿನಿಂದ ನಡೆದ ಘನತ್ಯಾಜ್ಯ ಸಂಪನ್ಮೂಲ ಪುನರ್ಬಳಕೆ ನಿರ್ವಹಣಾ ಕಾರ್ಯದ ವೀಕ್ಷಣೆ ನಡೆಸಿದ ಆಯುಕ್ತರು, ಪಾಲಿಕೆಯು ಘಟಕದ ಆವರಣದಲ್ಲಿ ಕೈಗೊಂಡ ಬೇರೆ ಬೇರೆ ಕಾರ್ಯಗಳ ಬಗ್ಗೆ ಮಾಹಿತಿ ಪಡೆದುಕೊಂಡರು.ಕೆಲ ತಿಂಗಳುಗಳ ಹಿಂದಷ್ಟೇ ಉಪ ಲೋಕಾಯುಕ್ತರಾದ ಬಿ ವೀರಪ್ಪ ಅವರು ಇಲ್ಲಿಗೆ ಭೇಟಿ ನೀಡಿ ಘಟಕದ ನಿರ್ವಹಣಾ ಕಾರ್ಯದ ಬಗ್ಗೆ ಪರಿಶೀಲಿಸಿ, ಕಾರ್ಯಚುರುಕುಗೊಳಿಸಲು ಸೂಚನೆ ನೀಡಿದ್ದರು. ಅದರಂತೆ ಪಾಲಿಕೆಯು ಈ ಕಾರ್ಯಕ್ಕೆ ಹೆಚ್ಚಿನ ಆದ್ಯತೆ ನೀಡಿದೆ. ಸಾಕಷ್ಟು ಪ್ರಮಾಣದಲ್ಲಿ ಹಾಕಲಾಗಿದ್ದ ಘನತಾಜ್ಯ ಸಂಪನ್ಮೂಲ ಪುನರ್ಬಳಕೆ ನಿರ್ವಹಣಾ ಕಾರ್ಯ ನಡೆಸಿ ಅರ್ಧದಷ್ಟು ತಾಜ್ಯವನ್ನು ವಿಲೆ ಮಾಡಿ ಈಗ ಮೊದಲಿಗಿಂತ ನಿರ್ವಹಣಾ ಕಾರ್ಯ ಚುರುಕಾಗಿ ನಡೆದಿದೆ. ಇನ್ನು ಕೆಲವೇ ತಿಂಗಳಲ್ಲಿ ಇಲ್ಲಿನ ಎಲ್ಲ ಘನತಾಜ್ಯವನ್ನು ಪುನರ್ಬಳಕೆ ಪ್ರಕ್ರಿಯೆಗೊಳಪಡಿಸಿ ಖಾಲಿ ಮಾಡುವುದಾಗಿ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಆಯುಕ್ತರಿಗೆ ತಿಳಿಸಿದರು.



**ಪಾಲಿಕೆಯ ವಾಹನಗಳ ವೀಕ್ಷಣೆ:** ರಾಯಚೂರು ಮಹಾನಗರ ಪಾಲಿಕೆಯಿಂದ ನಗರದ ಸ್ವಚ್ಛತೆಗಾಗಿ ಖರೀದಿಸಿರುವ ಸ್ವೀಪಿಂಗ್ ಯಂತ್ರ, ಒಳಚರಂಡಿ ಶುಚಿಗೊಳಿಸುವ ಮೌಂಟೇಡ್ ರೋಬೋ ಟಿಕ್ ಯಂತ್ರದ ಕಾರ್ಯವನ್ನು ಆಯುಕ್ತರು ವೀಕ್ಷಣೆ ನಡೆಸಿದರು. ನಗರದ ಕೃಷಿ ವಿಶ್ವವಿದ್ಯಾಲಯದ ಆವರಣದಲ್ಲಿ ಎರಡೂ ವಾಹನಗಳ ಕಾರ್ಯಗಳ ವೀಕ್ಷಣೆ ನಡೆಸಿದರು.

**ಮಾವಿನ ಕೆರೆ ಪ್ರದೇಶಕ್ಕೆ ಭೇಟಿ:** ರಾಯಚೂರು ಪ್ರವಾಸದಲ್ಲಿದ್ದ ಪ್ರಾದೇಶಿಕ ಆಯುಕ್ತರು, ಮಾವಿನ ಕೆರೆ ಪ್ರದೇಶಕ್ಕೆ ಭೇಟಿ ನೀಡಿದರು. ಮಾವಿನಕೆರೆ ಕೆರೆ ದಡದ ಮೇಲೆ ಕೈಗೊಂಡ ಕಾಮಗಾರಿ, ಉದ್ಯಾನ ನಿರ್ಮಾಣ, ಫುಟ್ ಪಾತ್ ನಿರ್ಮಾಣದ ಕಾಮಗಾರಿ ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು. ಕೆರೆಗೆ ನೀರು ಕಡಿಮೆ ಯಾದಾಗಲು ಸಹ ಉದ್ಯಾನ ನಿರ್ವಹಣೆಯು ಸಮರ್ಪಕವಾಗಿ ನಡೆಯುವಂತೆ ನೋಡಿಕೊಳ್ಳಲು ಆಯುಕ್ತರು ಸಲಹೆ ಮಾಡಿದರು. ಈ ಸಂದರ್ಭದಲ್ಲಿ ಪಾಲಿಕೆಯ ಸಮಿತಿಯ ಕಾರ್ಯದರ್ಶಿ ಕೃಷ್ಣ ಶಾವಂತಗೇರಿ, ಉಪ ಆಯುಕ್ತರಾದ ಶರಣಪ್ಪ ಸತ್ಯಂಪೇಟೆ, ಸಂತೋಷ ರಾಣಿ ಸೇರಿದಂತೆ ಪಾಲಿಕೆಯ ಇನ್ನಿತರ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

## ಲೇಬರ್ ಕೋಡ್ ಕಾರ್ಮಿಕರ ಹಕ್ಕುಗಳಿಗೆ ಮಾರಕ : ಶರ್ಫುದ್ದೀನ್ ಪೋತ್ನಾಳ

### ತಹಸೀಲ್ದಾರ್ ಮುಖಾಂತರ ಪ್ರಧಾನ ಮಂತ್ರಿಗಳಿಗೆ ಮನವಿ

ಯುವಮಾರ್ಗ ಸುದ್ದಿ

**ಮಾನ್ವಿ,ಫೆ.13–** ಕೇಂದ್ರ ಸರ್ಕಾರ ಜಾರಿಗೊಳಿಸಿರುವ 4 ಲೇಬರ್ ಕೋಡ್‌ಗಳು ಕಾರ್ಮಿಕ ವರ್ಗದ ಹಕ್ಕುಗಳಿಗೆ ಮಾರಕವಾಗಿವೆ ಎಂದು ಸಿಐಟಿಯು ತಾಲೂಕು ಅಧ್ಯಕ್ಷರಾದ ಹೆಚ್. ಶರ್ಫುದ್ದೀನ್ ಪೋತ್ನಾಳ ಆರೋಪಿಸಿದರು. ಇಂದು ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ಗ್ರೇಡ್ 2 ತಹಸೀಲ್ದಾರ್ ಅಬ್ದುಲ್ ವಾಹಿದ್ ಅವರ ಮುಖಾಂತರ ಪ್ರಧಾನ ಮಂತ್ರಿಗಳಿಗೆ ಮನವಿ ಸಲ್ಲಿಸಿ ಮಾತನಾಡಿದ ಅವರು, 29 ಕಾರ್ಮಿಕ ಕಾಯ್ದೆಗಳನ್ನು ರದ್ದುಪಡಿಸಿ 4 ಸಂಹಿತೆಗಳ ರೂಪದಲ್ಲಿ ಜಾರಿಗೊಳಿಸಿರುವ ಹೊಸ ನೀತಿ ಕಾರ್ಮಿಕರ ವೇತನ, ಇಎಸ್‌ಐ, ಪಿಎಫ್, ಗ್ರಾಚ್ಯುಟಿ ಸೇರಿದಂತೆ ಹಕ್ಕುಗಳನ್ನು ಕುಂಠಿತಗೊಳಿಸುತ್ತಿದೆ ಎಂದು ಹೇಳಿದರು. ಕನಿಷ್ಠ ವೇತನ ಹೆಚ್ಚಳಕ್ಕೆ ಸ್ಪಷ್ಟ ಭರವಸೆ ನೀಡದೇ ಕಾರ್ಮಿಕರನ್ನು ಅಸ್ಥಿರ ಉದ್ಯೋಗ ವ್ಯವಸ್ಥೆಗೆ ತಳ್ಳುವ ಪ್ರಯತ್ನ ನಡೆದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಇದಲ್ಲದೆ ನರೇಗಾ ಯೋಜನೆಯನ್ನು ದುರ್ಬಲಗೊಳಿಸುವುದು, ವಿದ್ಯುತ್ ಖಾಸಗೀಕರಣ, ಭೂಸ್ವಾಧೀನ ತಿದ್ದುಪಡಿ ಕಾಯ್ದೆಗಳ ಮೂಲಕ ರೈತರ ಹಿತಾಸಕ್ತಿಗೆ




ಧಕ್ಕೆ ಉಂಟುಮಾಡಲಾಗುತ್ತಿದೆ. ಅಂಗನವಾಡಿ, ಬಿಸಿಯೂಟ, ಆಶಾ ಸೇರಿದಂತೆ ಸ್ಕೀಮ್ ನೌಕರರನ್ನು ಖಾಯಂ ಮಾಡದೆ ಕಡಿಮೆ ಗೌರವಧನದಲ್ಲಿ ದುಡಿಸಿಕೊಳ್ಳುತ್ತಿರುವುದು ಅನ್ಯಾಯಕರವಾಗಿದೆ. ತಕ್ಷಣವೇ 4 ಲೇಬರ್ ಕೋಡ್‌ಗಳನ್ನು ಹಿಂಪಡೆದು, ಕಾರ್ಮಿಕ ರೈತರ ಪರ ನೀತಿಗಳನ್ನು ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಐಟಿಯುಸಿ ಸಂಗಯ್ಯಸ್ವಾಮಿ ಚಿಂಚರಕಿ, ಎಐಟಿಯುಸಿ ಸಂಚಾಲಕರಾದ ಎಂ.ಬಿ. ಸಿದ್ರಾಮಯ್ಯಸ್ವಾಮಿ, ಎಐಯುಟಿಯುಸಿ ಜಿಲ್ಲಾ ಸಂಚಾಲಕರಾದ ಚನ್ನಬಸವ ಜಾನೇಕಲ್, ಕಟ್ಟಡ ಕಾರ್ಮಿಕರ ಸಂಘದ ಅಧ್ಯಕ್ಷ ರುದ್ರಪ್ಪ ನಾಯಕ, ಗ್ರಾ.ಪಂ. ನೌಕರರ ಸಂಘದ ಅಧ್ಯಕ್ಷ ಅಂಬಣ್ಣ ನಾಯಕ ಬ್ಯಾಗವಾಟ್, ಅಂಗನವಾಡಿ ನೌಕರರ ಸಂಘ ಅಧ್ಯಕ್ಷೆ ಕಾಂ. ಚನ್ನಮ್ಮ, ಬಿಸಿಯೂಟ ನೌಕರರ ಸಂಘ ಅಧ್ಯಕ್ಷೆ ಕಾಂ. ತೆರೇಸಾ ಪಟ್ಟದಕಲ್, ಕಟ್ಟಡ ಕಾರ್ಮಿಕರ ಸಂಘದ ಪ್ರ. ಕಾರ್ಯದರ್ಶಿ ಆಂಜನೇಯ್ಯ ಕೋಟೆ, ಸಿದ್ದಲಿಂಗಯ್ಯ, ಪಿ. ಲಕ್ಷ್ಮೀಬಾಯಿ ಪೆರಿಕಲ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಕಲ್ಮಠ ಗಾರಿಗೆ ಜಾತ್ರೆ ಅಂಗವಾಗಿ ಶ್ರೀಮಠದ ಶ್ರೀಗಳನ್ನು ಗೌರವಿಸಿದ ಸಚಿವ ಎನ್.ಎಸ್.ಬೋಸರಾಜು

ಯುವಮಾರ್ಗ ಸುದ್ದಿ

**ಮಾನ್ವಿ,ಫೆ.13–** ಪಟ್ಟಣದ ಕಲ್ಮಠಕ್ಕೆ ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಆಗಮಿಸಿ ಶ್ರೀ ಮಠದ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳಿಂದ ಆಶೀರ್ವಾದ ಪಡೆದು ಮಾತನಾಡಿ ಪಟ್ಟಣದ ಕಲ್ಮಠ ವತಿಯಿಂದ ಶಿವರಾತ್ರಿ ಅಂಗವಾಗಿ ಪ್ರತಿ ವರ್ಷ ನಡೆಯುವ ಗಾರಿಗೆ ಜಾತ್ರೆಗೆ ತನ್ನದೆ ಆದ ಮಹಾತ್ವವಿದೆ. ಎಂದು ತಿಳಿಸಿದರು.



ನಂತರ ಶ್ರೀ ಮಠದ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳನ್ನು ಸಚಿವ ಎನ್.ಎಸ್.ಬೋಸರಾಜು ಸನ್ಮಾನಿಸಿ ಗೌರವಿಸಿದರು. ನಯೋಪ್ರ ಅಧ್ಯಕ್ಷರಾದ ಅಬ್ದುಲ್ ಗಫೂರ್ ಸಾಬ್ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರಾದ ನಾಗರಾಜ,ರಾಜಾಸುಭಾಶ್ಚಂದ್ರ ನಾಯಕ, ರಾಜಶೇಖರ ಪಾಟೀಲ್ , ಬಸವರಾಜ ಪಾಟೀಲ್ ಅತ್ತನೂರು, ,ಶಿವಮೂರ್ತಿ ,ಹಂಚಿನಾಳ ರಾಮಮೂರ್ತಿ, ರೌಡೂರು ಮಹಾಂತೇಶಸ್ವಾಮಿ, ಸೇರಿದಂತೆ ಇನ್ನಿತರರು ಇದ್ದರು.

## ಕರ್ನಾಟಕ ರಾಜ್ಯ ಕೈಗಾರಿಕಾ, ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಿಂದ ರಾಯಚೂರು ವಿಮಾನ ನಿಲ್ದಾಣ ಕಾಮಗಾರಿ ಪರಿಶೀಲನೆ






**ರಾಯಚೂರು ಫೆ,13–** ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಸ್.ಜಿ.ನಂಜಯ್ಯನಮಠ ಅವರು ಫೆ.13ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಯರಮರಸ್ ಬಳಿಯ ವಿಮಾನ ನಿಲ್ದಾಣ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ಸುದ್ದಿಗಾರರೊಂದಿಗೆ ಅವರು ಮಾತನಾಡಿ, ಒಟ್ಟಾರೆ 322 ಎಕರೆ ವಿಸ್ತೀರ್ಣ ಪ್ರದೇಶದಲ್ಲಿ ರಾಯಚೂರು ವಿಮಾನ ನಿಲ್ದಾಣ ಕಾಮಗಾರಿ ನಡೆಯುತ್ತಿದೆ. ಕಾಮಗಾರಿಯು ಈಗಾಗಲೇ ಶೇ.31ರಷ್ಟು ಪೂರ್ಣವಾಗಿದೆ. ಬರುವ ಎರಡೂವರೆ ತಿಂಗಳಲ್ಲಿ ರನ್ ವೇ ಕಾಮಗಾರಿಯು ಪೂರ್ಣವಾಗಲಿದೆ. ಈ ವರ್ಷದಲ್ಲಿ ಮಳೆ ನಿರಂತರವಾಗಿ ಸುರಿದ ಕಾರಣ ರನ್ ವೇ ಕಾಮಗಾರಿಯು ಮಂದಗತಿಯಲ್ಲಿ ಸಾಗಿತ್ತು ಎಂದು ತಿಳಿಸಿದರು.

ಒಟ್ಟಾರೆ ಮುಂದಿನ ಒಂದೂವರೆ ವರ್ಷದ ಕಾಲಾವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸುವ ಗುರಿ ಹೊಂದಿದ್ದೇವೆ. ಮುಂದಿನ 3 ತಿಂಗಳಲ್ಲಿ ಮತ್ತೆ ರಾಯಚೂರು ಪ್ರವಾಸ ಕೈಗೊಂಡು ಪುನಃ ಅಭಿವೃದ್ಧಿ ಕಾರ್ಯ ಪರಿಶೀಲಿಸುವೆ ಎಂದು ಅವರು ತಿಳಿಸಿದರು. ಏಗನೂರು ಗ್ರಾಮದಲ್ಲಿ 30 ಮನೆಗಳು ಬೇರೆಡೆಗೆ ಸ್ಥಳಾಂತರ ಮಾಡಲು ಮೂರು ಎಕರೆ ಜಮೀನು ಹಾಗೂ ದಂಡ ಗ್ರಾಮದಲ್ಲಿನ 108 ಮನೆಗಳನ್ನು ಬೇರೆಡೆ ಸ್ಥಳಾಂತರ ಮಾಡಲು ಆರು ಎಕರೆ ಜಮೀನಿನಲ್ಲಿ ಲೇಔಟ್ ಕಾರ್ಯ ನಡೆಯುತ್ತಿದೆ ಎಂದು ಅವರು ತಿಳಿಸಿದರು.

ವಿಮಾನ ನಿಲ್ದಾಣ ಕಾಮಗಾರಿಯ ಸಂಬಂಧ ಬೇರೇಡೆಗೆ ಸ್ಥಳಾಂತರ ವಾಗುವ ಎರಡು ಗ್ರಾಮಗಳಲ್ಲಿನ ಗ್ರಾಮಸ್ಥರಿಗೆ ಅವರ ಮನೆಯ ಕಿಮ್ಮತಿನ ಪರಿಹಾರವನ್ನು ನೀಡಲಾಗಿದೆ ಎಂದು ಅವರು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮುಖಂಡರಾದ ರಾಜು ಬಂಡಿಕೇರಿ, ರಾಜು ಹರಿಳಯ್ಯಮಠ, ಲೋಕೋಪಯೋಗಿ ಇಲಾಖೆ ಅಭಿಯಂತರಾದ ಮಹೇಶ್ ಸೇರಿದಂತೆ ಇತರರು ಇದ್ದರು.

## ಮೊದಲನೇಯ ಪುಟದಿಂದ

# ಕುತೂಹಲ ಮೂಡಿಸಿದ ಸಿಎಂ-ಡಿಸಿಎಂ ನಡೆ ಸಿಎಂ ಬದಲಾವಣೆ ಕಾಲ ಸನ್ನಿಹಿತ..?

ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆಯಲ್ಲಿ ಇಂದು ಅಣೆಕಟ್ಟೆಗಳ ಸುರಕ್ಷತೆ ಕುರಿತು ಅಂತಾರಾಷ್ಟ್ರೀಯ ಸಮ್ಮೇಳನ ನಡೆಯಿತು. ಅದರಲ್ಲಿ ಭಾಗವಹಿಸಿದ್ದ ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ತಮ ಪಾಡಿಗೆ ತಾವು ಮೊಬೈಲ್ ನೋಡುವುದರಲ್ಲಿ ಅಥವಾ ಕಾಗದ ಪತ್ರಗಳನ್ನು ಓದುವುದರಲ್ಲಿ ಮಗ್ನರಾಗಿದ್ದರು.

ಸಮಯ ಕಳೆಯಲು ಡಿ.ಕೆ.ಶಿವಕುಮಾರ್ ಅವರು ಕಾರ್ಯಕ್ರಮ ಆಯೋಜಕರನ್ನು ಕರೆದು ಸಲಹೆ ಸೂಚನೆ ನೀಡುವ ಮೂಲಕ ಸಕ್ರಿಯವಾಗಿರಲು ಯತ್ನಿಸಿದರು. ಆ ಸಂದರ್ಭದಲ್ಲಿ ಸಿದ್ದರಾಮಯ್ಯ ಅವರು ಡಿ.ಕೆ.ಶಿವಕುಮಾರ್ ಅವರನ್ನೆ ನೋಡುತ್ತಲಿದ್ದರು. ಈ ಹಂತದಲ್ಲಿ ಸೌಜನ್ಯಕ್ಕಾದರೂ ಡಿ.ಕೆ.ಶಿವಕುಮಾರ್ ಮತ್ತು ಸಿದ್ದರಾಮಯ್ಯ ಪರಸ್ಪರ ಮಾತನಾಡಲಿಲ್ಲ. ತಮ್ಮ ಪಾಡಿಗೆ ತಾವು ಇದ್ದು ಬಿಟ್ಟರು.

ಅಧಿಕಾರ ಹಂಚಿಕೆಯ ಬಗ್ಗೆ ಹೈಕಮಾಂಡ್ ನಿರ್ಧಾರ ತೆಗೆದುಕೊಳ್ಳುತ್ತದೆ ಎಂದು ಹೇಳುತ್ತಿದ್ದ ಡಿ.ಕೆ.ಶಿವಕುಮಾರ್ ದೆಹಲಿಯಲ್ಲಿ ವರಿಷ್ಠರ ಭೇಟಿಯ ಬಳಿಕ ಕಾಲವೇ ಉತ್ತರ ನೀಡುತ್ತದೆ ಎಂದು ಹೇಳಲಾರಂಭಿಸಿದ್ಧಾರೆ.

ಬೆಳಗಾವಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿರುವ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರ ಸಹೋದರರೂ ಆಗಿರುವ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿ ಹೊಳಿ, 2023ರಲ್ಲಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲೆ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಿದೆ. ಆದರೆ ಡಿ.ಕೆ.ಶಿವಕುಮಾರ್ ಯಾವ ಸಂದರ್ಭದಲ್ಲಿ ಪಕ್ಷದ ಸಾರಥ್ಯ ವಹಿಸಿಕೊಂಡಿದ್ದರು ಎಂಬುದು ಗಮನಾರ್ಹ. ಸುಳ್ಳು ಆರೋಪದ ಮೇಲೆ ಡಿ.ಕೆ.ಶಿವಕುಮಾರ್ ಅವರನ್ನು ಬಂಧಿಸಲಾಗಿತ್ತು. ಕೋವಿಡ್ ಸಂದರ್ಭದಲ್ಲಿ ಕಾಂಗ್ರೆಸ್‌ನ ಎಲ್ಲರನ್ನೂ ದುಡಿಸಿಕೊಳ್ಳುವ ಮೂಲಕ ಪಕ್ಷ ಸಂಘಟಿಸಿದ್ದರು.

ವಿಧಾನಸಭೆ ಚುನಾವಣೆಯಲ್ಲಿ 136 ಸ್ಥಾನಗಳಲ್ಲಿ ಕಾಂಗ್ರೆಸ್ ಗೆಲ್ಲುತ್ತದೆ ಎಂದು ಡಿ.ಕೆ.ಶಿವಕುಮಾರ್ ಮೊದಲೇ ಅಂದಾಜಿಸಿದ್ದರು ಎಂದರೆ ಅವರು ಎಷ್ಟು ಪೂರ್ವತಯಾರಿ ನಡೆಸಿದ್ದರು ಎಂದು ಊಹಿಸಬಹುದು. ಅವರು ಮುಖ್ಯಮಂತ್ರಿಯಾಗಬೇಕು ಎಂಬುದು ನಮೆಲ್ಲರ ಬಯಕೆಯಾಗಿದೆ ಎಂದರು.ಗೋವಾದಲ್ಲಿ ರೆಸಾರ್ಟ್ ರಾಜಕಾರಣ ಮಾಡಲು ತಯಾರಿಯಾಗಿದೆ ಎಂಬುದು ಸುಳ್ಳು, ಡಿ.ಕೆ.ಶಿವಕುಮಾರ್ ಹುಟ್ಟಾ ಕಾಂಗ್ರೆಸ್ಸಿಗರು. ಯಾವತ್ತೂ ಅವರು ಗುಂಪುಗಾರಿಕೆ ಮಾಡುವುದಿಲ್ಲ. ರೆಸಾರ್ಟ್ ರಾಜಕೀಯ ಕಾಂಗ್ರೆಸ್‌ನಲ್ಲಿ ಇಲ್ಲ. ಅಧಿಕಾರ ಹಂಚಿಕೆ ಹೈಕಮಾಂಡ್ ನ ನಿರ್ಧಾರಕ್ಕೆ ಸಂಬಂಧಿಸಿದ ವಿಷಯ. ಅವರು ಯಾವತ್ತೂ ಸಮಯ ನಿಗದಿ ಮಾಡುತ್ತಾರೋ ಅಂದು ನೆರವೇರಲಿದೆ ಎಂದು ಹೇಳಿದರು.

ಕೊಪ್ಪಳದಲ್ಲಿ ಮಾತನಾಡಿರುವ ರಾಘವೇಂದ್ರ ಹಿಟ್ನಾಳ್, ಹೈಕಮಾಂಡ್ ನಾಯಕತ್ವ ಬದಲಾವಣೆಯಾಗಲಿದೆ ಎಂದು ಹೇಳಿಲ್ಲ. ಹಾಗೇ ಹೇಳದೆ ಇದ್ದರೆ ಸಿದ್ದರಾಮಯ್ಯ ಅವರು ಐದು ವರ್ಷ ಅಧಿಕಾರ ಪೂರ್ಣಗೊಳಿಸುತ್ತಾರೆ ಎಂಬ ವಿಶ್ವಾಸ ನಮ್ಮಲ್ಲಿದೆ. ಸಚಿವ ಸಂಪುಟ ಪುನರ್ ರಚನೆಯೂ ಶೀಘ್ರದಲ್ಲೆ ನಡೆಯಲಿದೆ. ತಮಗೂ ಅವಕಾಶ ಸಿಗಲಿದೆ ಎಂದು ಹೇಳಿದ್ದಾರೆ.

# ಸಂಗಮ ಕಲಾತಂಡ ವತಿಯಿಂದ ರಮಾಬಾಯಿ ನಾಟಕ ಪ್ರದರ್ಶನ



ಯುವಮಾರ್ಗ ಸುದ್ದಿ

**ಮಾನ್ವಿ,ಫೆ.13–** ಪಟ್ಟಣದ ಲೊಯೋಲ ಕಾಲೇಜಿನ ಸಭಾಂಗಣದಲ್ಲಿ ಬೆಳಗು ಸಂಸ್ಥೆ ಮುದ್ದಮಗುಡ್ಡಿ ಹಾಗೂ ಬಾಗಲಕೋಟೆ ಸಂಗಮ ಕಲಾತಂಡ ವತಿಯಿಂದ ರಮಾಬಾಯಿ ಕಾದಂಬರಿ ಆಧಾರಿತ ನಾಟಕ ಪ್ರದರ್ಶನಕ್ಕೆ ಲೊಯೋಲ ಕಾಲೇಜಿನ ಪ್ರಾಚಾರ್ಯರಾದ ಫಾ. ವಿನೋದ್ ಪೌಲ್ ಚಾಲನೆ ನೀಡಿ ಮಾತನಾಡಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ರವರ ಜೀವನದಲ್ಲಿ ಪತ್ನಿ ರಮಾಬಾಯಿ ಅವರ ಪಾತ್ರ ಕುರಿತು ಪ್ರೊ. ಹೆಚ್.ಟಿ ಪೋತೆಯವರು ಬರೆದ ರಮಾಬಾಯಿ ಕಾದಂಬರಿ ಆಧಾರಿತವಾಗಿ ರಮಾಬಾಯಿ ನಾಟಕವನ್ನು ರೂಪಿಸಲಾಗಿದೆ ಈ ನಾಟಕದಲ್ಲಿ ಬಾಗಲಕೋಟೆ ಸಂಗಮ ಕಲಾತಂಡದವರು ಅಂಬೇಡ್ಕರ್ ಅವರ ವಿದ್ಯಾಭ್ಯಾಸ, ಕಷ್ಟಗಳ ಮಧ್ಯ ಸಾಗಿದ ಕುಟುಂಬದ ಹಿನ್ನೆಲೆ, ರಮಬಾಯಿ ಪಟ್ಟಿರುವ ಪಾಡು,ಶಾಹು ಮಹಾರಾಜರ ವಿದ್ಯಾಭ್ಯಾಸಕ್ಕೆ ನೀಡಿದ ಪ್ರೋತ್ಸಾಹ, ಮಹಡ್ ಕೆರೆಯ ಸತ್ಯಾಗ್ರಹ, ಅಂಬೇಡ್ಕರ್ ಅವರ ತಮ್ಮ ಮಕ್ಕಳನ್ನು ಕಳೆದುಕೊಂಡ ದಾರುಣ ಘಟನೆ, ಛಲ ಬಿಡದೆ ಶೋಷಿತ ಧಮನಿತರ ಬದುಕಿಗೆ ಬೆಳಕಾಗುವ ನಿಟ್ಟಿನಲ್ಲಿ ಅಂಬೇಡ್ಕರ ಅವರ ಅವಿರತ ಶ್ರಮವವನ್ನು ಕಲಾವಿದರು ನಾಟಕದಲ್ಲಿ ಉತ್ತಮವಾಗಿ ಅಭಿನಯಿಸಿದ್ದಾರೆ. ಎಂದು ತಿಳಿಸಿದರು.

ಸಂಗಮ ಕಲಾತಂಡ ಬಾಗಲಕೋಟೆಯುವರ ಉತ್ತಮ ಪ್ರದರ್ಶನಕ್ಕಾಗಿ ಕಲಾವಿದರನ್ನು ಸನ್ಮಾನಿಸಿ ಗೌರವಿಸಲಾಯಿತು. ಉಪಪ್ರಾಂಶುಪಾಲರಾದ ಖಾಸಿಂ ಸಾಬ್, ಕರ್ನಾಟಕ ಮಾದಿಗರ ಸಂಘದ ರಾಜ್ಯಾಧ್ಯಕ್ಷರಾದ ಪ್ರಭುರಾಜ್ ಕೊಡ್ಲಿ, ಬೆಳಗು ಟ್ರಸ್ಟ್ ಅಧ್ಯಕ್ಷರಾದ ಎ.ಶರಣಕುಮಾರ , ಕಾರ್ಮಿಕ ಇಲಾಖೆಯ ನಿರೀಕ್ಷಕರಾದ ಮಿರ್ಜಾ ಮೊಹಮ್ಮದ್ ಬೇಗ್, ದಲಿತ ಪ್ಯಾಂಥರ್ನ ಜಿಲ್ಲಾಧ್ಯಕ್ಷರಾದ ಲಕ್ಷ್ಮಣ, ಜನಶಕ್ತಿ ಮಾರೆಪ್ಪ ಹರಿವಿ, ರಾಘವೇಂದ್ರ ಚೌಡ್ಕಿ, ಉಪನ್ಯಾಸಕ ದೇವಣ್ಣ, ಸೇರಿದಂತೆ ಕಾಲೇಜಿನ ಉಪನ್ಯಾಸಕರು , ವಿದ್ಯಾರ್ಥಿಗಳು ಇದ್ದರು.

## ಜಿಲ್ಲಾಡಳಿತದಿಂದ ಫೆ.15ರಂದು ಸಂತ ಶ್ರೀಸೇವಾಲಾಲ್ ಜಯಂತಿ

**ರಾಯಚೂರು ಫೆ,13–** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಸಂತ ಶ್ರೀಸೇವಾಲಾಲ್ ಜಯಂತಿ ಕಾರ್ಯಕ್ರಮವು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಫೆಬ್ರವರಿ 15ರ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟಿಸುವರು. ಟನೆ ನೆರವೇರಿಸುವರು. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು. ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಶಿ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು.

ಲಿಂಗಸುಗೂರಿನ ಉಪನ್ಯಾಸಕರಾದ ಶಂಕರ ಎಂ.ಪವಾರ್ ಅವರು ಸಂತ ಶ್ರೀಸೇವಾಲಾಲ್ ಅವರ ಕುರಿತು ಉಪನ್ಯಾಸ ನೀಡುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫೆ.18ರಿಂದ 4 ವಾರಗಳ ಕಾಲ ಬ್ಯೂಟಿಪಾರ್ಲರ್ ತರಬೇತಿ

**ರಾಯಚೂರು ಫೆ,13–** ರಾಜ್ಯ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ, ಬೆಂಗಳೂರು ಹಾಗೂ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್) ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಸ್ವ-ಉದ್ಯೋಗವನ್ನು ಸ್ಥಾಪಿಸಲು ಇಚ್ಛಿಸಿದ ಎಲ್ಲಾ ವರ್ಗದ ಮಹಿಳಾ ಅಭ್ಯರ್ಥಿಗಳಿಗೆ 4 ವಾರಗಳ ಬ್ಯೂಟಿಪಾರ್ಲರ್ ತರಬೇತಿ ಕಾರ್ಯಕ್ರಮವನ್ನು ಫೆ.18ರಿಂದ ರಾಯಚೂರಿನಲ್ಲಿ ಹಮ್ಮಿಕೊಳ್ಳಲಾಗಿದೆ.

ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಉದ್ಯಮಶೀಲತೆಯ ಗುಣಲಕ್ಷಣಗಳು ಸ್ವಂತ ಉದ್ಯೋಗ ಸ್ಥಾಪಿಸಲು ಸರ್ಕಾರದ ಯೋಜನೆಗಳು, ಬ್ಯಾಂಕಿನ ವ್ಯವಹಾರ ಮತ್ತು ಸಾಲ ಸೌಲಭ್ಯಗಳ ಮಾಹಿತಿ ಹಾಗೂ ಸ್ವಯಂ ಉದ್ಯಮಗಳನ್ನು ಸ್ಥಾಪಿಸಲು ಇತ್ಯಾದಿ ವಿಷಯಗಳ ಕುರಿತು ಮಾಹಿತಿ ನೀಡಲಾಗುವುದು.

ಜಿಲ್ಲೆಯ ಆಸಕ್ತ ಎಲ್ಲಾ ವರ್ಗದ ಮಹಿಳಾ ಅಭ್ಯರ್ಥಿಗಳು 18 ವರ್ಷ ದಿಂದ 35 ವರ್ಷ ವಯಸ್ಸಿನವರಾಗಿರಬೇಕು. ಕನಿಷ್ಠ ಹತ್ತನೇ ತರಗತಿ ಪಾಸಾಗಿರಬೇಕು. ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಸಕ್ತರಿರುವವರು ದಿನಾಂಕ: 16-02-2026ರೊಳಗಾಗಿ ಮೊಬೈಲ್ ಸಂಖ್ಯೆ: 9986600631ಗೆ ಸಂಪರ್ಕಿಸಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಅಥವಾ ಜಂಟಿ ನಿರ್ದೇಶಕರು, ಸಿಡಾಕ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಛೇರಿ, ನವೀನ ಆಸ್ಪತ್ರೆ ಪಕ್ಕದಲ್ಲಿ, ರಾಯಚೂರು ಇಲ್ಲಿಗೆ ಬಂದು ಅರ್ಜಿ ಸಲ್ಲಿಸಬಹುದಾಗಿದೆ ಎಂದು ಸಿಡಾಕ್ ಜಂಟಿ ನಿರ್ದೇಶಕರು ಪತ್ರಿಕಾ ಪ್ರಕಟಣೆಯಲ್ಲಿ ಕೋರಿದ್ದಾರೆ.

## ಬೇಸಿಗೆ ನಿರ್ವಹಣೆಗೆ ಕೂಡಲೇ ಕ್ರಿಯಾಯೋಜನೆ ಸಿದ್ಧಪಡಿಸಿ: ಶಾಸಕರಾದ ಬಸನಗೌಡ ದದ್ದಲ್ ಸೂಚನೆ



ಯುವಮಾರ್ಗ ಸುದ್ದಿ

**ರಾಯಚೂರು ಫೆ,13–** ಬೇಸಿಗೆಯ ಅವಧಿಯಲ್ಲಿ ರಾಯಚೂರು ಗ್ರಾಮೀಣ ಕ್ಷೇತ್ರದ ಪ್ರತಿಯೊಂದು ಗ್ರಾಮಕ್ಕೂ ಸರಿಯಾದ ರೀತಿಯಲ್ಲಿ ಕುಡಿಯುವ ನೀರು ಪೂರೈಕೆಗೆ ಅಗತ್ಯ ವ್ಯವಸ್ಥೆಯಾಗುವುದು ಸೇರಿದಂತೆ ಫೆಬ್ರವರಿ, ಮಾರ್ಚ, ಏಪ್ರೀಲ್, ಮೇ ಹಾಗೂ ಜೂನ್ ಅವಧಿವರೆಗೆ ಬೇಸಿಗೆ ನಿರ್ವಹಣೆಗೆ ಕ್ರಿಯಾಯೋಜನೆ ಸಿದ್ಧಪಡಿಸಬೇಕು ಎಂದು ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರದ ತಾಲೂಕು ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಫೆ.12ರಂದು ನಡೆದ ಟಾಸ್ಕ್ಫೋರ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೇಸಿಗೆಯ ಅವಧಿಯಲ್ಲಿ ತುರ್ತು ಸಂದರ್ಭದಲ್ಲಿ ನೀರು ಪೂರೈಕೆಗೆ ಅನುಕೂಲವಾಗುವಂತೆ ಅಗತ್ಯ ಏರ್ಪಾಡನ್ನು ಈಗಿನಿಂದಲೇ ಮಾಡಿಕೊಳ್ಳಬೇಕು. ಮುಖ್ಯ ಜಲಸಂಗ್ರಹಗಾರಗಳಾದ ಕೆರೆಗಳಲ್ಲಿ ಲಭ್ಯವಿರುವ ಗರಿಷ್ಟ ಮತ್ತು ಕನಿಷ್ಟ ನೀರಿನ ಸಾರ್ಥ್ಯದ ಬಗ್ಗೆ ಗಮನ ಹರಿಸಬೇಕು ಎಂದು ಶಾಸಕರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ರಾಯಚೂರು ಗ್ರಾಮೀಣ ಕ್ಷೇತ್ರದಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಿಸಬಹುದಾದ ಗ್ರಾಮ ಪಂಚಾಯತ್‌ಗಳ ಸಂಖ್ಯೆ ಎಷ್ಟು? ಗ್ರಾಮಗಳ ಸಂಖ್ಯೆ ಎಷ್ಟು? ಯಾವ ಯಾವ ಕಡೆಗಳಲ್ಲಿ ನೀರಿನ ಸಮಸ್ಯೆಯಾಗಬಹುದು? ನೀರು ಸರಬರಾಜು ಮೂಲಗಳಾದ ನದಿ ಹಳ್ಳ ಬೋರವೆಲ್‌ಗಳ ಸಂಖ್ಯೆ ಎಷ್ಟು? ಬೇಕಾಗುವ ಅನುದಾನ ಎಷ್ಟು? ಇದುವರೆಗೆ ಬಾಡಿಗೆ ಪಡೆದಿರುವ ಖಾಸಗಿ ಬೋರವೆಲ್‌ಗಳ ಸಂಖ್ಯೆ? ಖಾಸಗಿ ಬೋರವೆಲ್ ಮೂಲಕ ನೀರು ಸರಬರಾಜು ಮಾಡಿದ ಗ್ರಾಮಗಳ ಸಂಖ್ಯೆ? ಈ ರೀತಿಯ ನಾನಾ ಅಂಶಗಳ ಬಗ್ಗೆ ಕೂಡಲೇ ಅಧಿಕಾರಿಗಳು ಕಾಳಜಿಯಿಂದ ಕ್ರಿಯಾಯೋಜನೆ ಸಿದ್ಧಪಡಿಸಿ ಕಾರ್ಯನುಷ್ಠಾನ ಮಾಡಬೇಕು ಎಂದು ಶಾಸಕರು ಸೂಚನೆ ನೀಡಿದರು.

ಬೇಸಿಗೆಯ ಅವಧಿಯಲ್ಲಿ ಯಾವುದೇ ಕಡೆಗಳಲ್ಲಿ ಬೋರವೆಲ್‌ಗಳಿಂದ ನೀರು ಸ್ಥಗಿತವಾಗಿ ಕೊರತೆಯಾದಲ್ಲಿ ಅಂತಹ ಕಡೆಗೆ ಖಾಸಗಿ ಬೋರವೆಲ್‌ಗಳು ಎಲ್ಲೆಲ್ಲಿ ಇವೆ ಎಂಬುದರ ಬಗ್ಗೆ ಮುಂಚಿತವಾಗಿಯೇ ಪಟ್ಟಿ ಮಾಡಿ ರ್‍ಯಾಯ ವ್ಯವಸ್ಥೆಗೆ ಈಗಿನಿಂದಲೇ ಯೋಜನೆ ರೂಪಿಸಬೇಕು ಎಂದು ಶಾಸಕರು ಎಲ್ಲ ಪಿಡಿಓಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

**ಮೇಲ್ವಿಚಾರಣೆಗೆ ಸೂಚನೆ:** ನಮ್ಮ ಗ್ರಾಮಕ್ಕೆ ನೀರು ಸಿಗುತ್ತಿಲ್ಲ ಎಂದು ಬೇಸಿಗೆಯ ಅವಧಿಯಲ್ಲಿ ಯಾವುದೇ ಗ್ರಾಮಸ್ಥರಿಂದ ದೂರುಗಳು ಬರಬಾರದು. ಪಿಡಿಓಗಳು ಪಂಚಾಯತ್ ವ್ಯಾಪ್ತಿಯ ಎಲ್ಲ ಗ್ರಾಮಗಳಿಗೆ ಕಾಲಕಾಲಕ್ಕೆ ಭೇಟಿ ನೀಡಿ ಅಲ್ಲಿನ ಪರಿಸ್ಥಿತಿಯ ಬಗ್ಗೆ ಗ್ರಾಮಸ್ಥರಿಂದ ತಿಳಿದುಕೊಳ್ಳಬೇಕು. ಗ್ರಾಮಸ್ಥರೊಂದಿಗೆ ಉತ್ತಮ ಬಾಂಧವ್ಯ ಇಟ್ಟುಕೊಂಡು ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದ ಶಾಸಕರು, ತಹಸೀಲ್ದಾರರು ಮತ್ತು ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು ಕಾಲಕಾಲಕ್ಕೆ ಕಂದಾಯ ಮತ್ತು ಪಿಡಿಓಗಳ ಸಭೆ ನಡೆಸಿ ಸೂಕ್ತ ಮೇಲ್ವಿಚಾರಣೆ ಮಾಡಬೇಕು ಎಂದು ಶಾಸಕರು ನಿರ್ದೇಶನ ನೀಡಿದರು.

**ವಾರದ ಗಡುವು:** ನೀವು ನಿಯಮಿತವಾಗಿ ಗ್ರಾಮಗಳಿಗೆ ಭೇಟಿ ನೀಡುತ್ತಿದ್ದೀರಾ? ಆಯಾ ಗ್ರಾಮಗಳಲ್ಲಿ ನೀರಿನ ಪರಿಸ್ಥಿತಿ ಏನಿದೆ ಎಂಬುದು ತಿಳಿದಿದೆಯಾ? ಎಂದು ಸಭೆಯಲ್ಲಿ ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳಿಗೆ ಶಾಸಕರು ಪ್ರಶ್ನಿಸಿದರು. ಗ್ರಾಮೀಣ ಕ್ಷೇತ್ರದ ಎಲ್ಲ ಗ್ರಾಮಗಳಿಗೆ ಭೇಟಿ ನೀಡಿ ಅಲ್ಲಿನ ಕೆರೆಗಳ ಸ್ಥಿತಿ, ಕುಡಿವ ನೀರಿನ ಪರಿಸ್ಥಿತಿ ಸೇರಿದಂತೆ ಸಮಗ್ರ ಮಾಹಿತಿಯನ್ನು ನೀಡುವಂತೆ ಆರ್‌ಡಬ್ಲೂ ಎಸ್ ಅಧಿಕಾರಿಗಳಿಗೆ ಶಾಸಕರು ವಾರದ ಗಡುವು ವಿದಿಸಿದರು.

**ವರದಿ ಒಪ್ಪಿಸಿದ ಅಧಿಕಾರಿಗಳು:** ರಾಯಚೂರು ಗ್ರಾಮೀಣ ಕ್ಷೇತ್ರದಲ್ಲಿ ಗ್ರಾಮ, ಹೋಬಳಿವಾರು ಕುಡಿವ ನೀರಿನ ವಾಸ್ತವ ಪರಿಸ್ಥಿತಿಯ ಬಗ್ಗೆ ಸಮಗ್ರ ಅವಲೋಕಿಸಿದರು. ತಮ್ಮ ತಮ್ಮ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಬೇಸಿಗೆ ನಿರ್ವಹಣೆಗೆ ಮಾಡಿಕೊಂಡ ಸಿದ್ಧತೆ ಬಗ್ಗೆ ಆಯಾ ಪಿಡಿಓಗಳು ಸಭೆಗೆ ವರದಿ ಒಪ್ಪಿಸಿದರು. ಸಭೆಯಲ್ಲಿ ಎಪಿಎಂಸಿ ಅಧ್ಯಕ್ಷರಾದ ಮಲ್ಲಿಕಾರ್ಜುನಗೌಡ ತಲಮಾರಿ, ತಹಸೀಲ್ದಾರ ಸುರೇಶ ವರ್ಮಾ, ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಪವಾರ, ಅರಣ್ಯ ಸಂರಕ್ಷಣಾಧಿಕಾರಿ ಸೇರಿದಂತೆ ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು, ವಿವಿಧ ಗ್ರಾಮ ಪಂಚಾಯತಗಳ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಇದ್ದರು.

## ಎ.ಐ.ಡಿ.ವೈ.ಓ. ವತಿಯಿಂದ ಸಹಿ ಸಂಗ್ರಹ ಅಭಿಯಾನ: ಚನ್ನಬಸವ ಜಾನೇಕಲ್




ಯುವಮಾರ್ಗ ಸುದ್ದಿ

**ಮಾನ್ವಿ,ಫೆ.13–** ಪಟ್ಟಣದಲ್ಲಿ ಆಲ್ ಇಂಡಿಯಾ ಡೆಮಾಕ್ರೆಟಿಕ್ ಯೂತ್ ಆರ್ಗನೈಸೇಶನ್ ವತಿಯಿಂದ ನಡೆದ ಸಹಿ ಸಂಗ್ರಹ ಅಭಿಯಾನಕ್ಕೆ ಎ.ಐ.ಡಿ.ವೈ.ಓ. ಜಿಲ್ಲಾಧ್ಯಕ್ಷರಾದ ಚನ್ನಬಸವ ಜಾನೇಕಲ್ ಚಾಲನೆ ನೀಡಿ ಮಾತನಾಡಿ ಕೇಂದ್ರ ಸರ್ಕಾರದ 78 ಇಲಾಖೆಗಳಲ್ಲಿ ಖಾಲಿ ಇರುವ 9.79 ಲಕ್ಷ ಹುದ್ದೆಗಳನ್ನು ಹಾಗೂ ಲಕ್ಷರಾಜ್ಯದ 43 ಇಲಾಖೆಗಳಲ್ಲಿನ 2.85 ಲಕ್ಷ ಹುದ್ದೆಗಳನ್ನು ಭರ್ತಿ ಮಾಡಬೇಕು. ಎಲ್ಲಾ ನೇಮಕಾತಿಗಳ ವಯೋಮಿತಿಯನ್ನು ಕನಿಷ್ಠ ಐದು ವರ್ಷ ಹೆಚ್ಚಿಸಬೇಕು. ಎಲ್ಲಾ ನೇಮಕಾತಿ ಪ್ರಕ್ರಿಯೆಗಳನ್ನು ಸಂಪೂರ್ಣವಾಗಿ ಪಾರದರ್ಶಕವಾಗಿ ನಡೆಸಬೇಕು. ಎಲ್ಲಾ ರೀತಿಯ ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟಬೇಕು. ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಬೇಕು. ಹುದ್ದೆಗಳ ನೇಮಕಾತಿ ಅರ್ಜಿ ಶುಲ್ಕವನ್ನು ಸಂಪೂರ್ಣವಾಗಿ ಕೈಬಿಡಬೇಕು. ನೇಮಕಾತಿ ಪರೀಕ್ಷೆಗಳ ಮತ್ತು ಸಂಗಮ ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳಿಗೆ ಉಚಿತ ಪ್ರಯಾಣಿಕೆ ಅನುಕೂಲ ಮಾಡಿಕೊಡಬೇಕು. ಉದ್ಯೋಗ ದೊರೆಯುವವರಿಗೆ ಗೌರವಯುತ ಜೀವನ ನಡೆಸಲು ನಿರುದ್ಯೋಗ ಬತ್ಯೆಯನ್ನು ನೀಡಬೇಕು ಎಂದು ಒತ್ತಾಯಿಸಿದರು. ತಾಲೂಕಿನ ಆಶಾ, ಅಂಗನ ವಾಡಿ, ಬಿಸಿಊಟ, ಹಾಸ್ಟೆಲ್ ಕಾರ್ಮಿಕರು, ರೈತರು, ಯುವಜ ನರು, ನಾಗರಿಕರು ಸಹಿ ಮಾಡುವ ಮೂಲಕ ಸಹಿ ಸಂಗ್ರಹ ಅಭಿಯಾನಕ್ಕೆ ಬೆಂಬಲಿಸಿದರು. ಎ.ಐ.ಡಿ.ವೈ.ಓ.ವಿನೋದ್ ಕುಮಾ ರ್ ಸೇರಿದಂತೆ ಆಶಾ, ಅಂಗನವಾಡಿ, ಬಿಸಿಊಟ, ಹಾಸ್ಟೆಲ್ ಕಾರ್ಮಿಕರು, ಭಾಗವಹಿಸಿದರು.

# ರೈತರ,ಮಹಿಳೆಯರ ಜೀವನಾಡಿ ಡಿಸಿಸಿ ಬ್ಯಾಂಕ್ ಉಳಿಸಿ-ದಯಾನಂದ್



**ಕೋಲಾರ.ಫೆ,13–** ರೈತರು, ಮಹಿಳೆಯರ ಆರ್ಥಿಕ ಜೀವನಾಡಿಯಾಗಿರುವ ಡಿಸಿಸಿ ಬ್ಯಾಂಕ್ ಉಳಿಸದಿದ್ದಲ್ಲಿ ಮುಂದಿನ ದಿನಗಳಲ್ಲಿ ಮೀಟರ್ ಬಡ್ಡಿ ದಂಧೆ ಬಲಗೊಳ್ಳಲು ಕಾರಣವಾಗುತ್ತದೆ ಎಂದು ತಾಲೂಕಿನ ಕಡಗಟ್ಟೂರು ವಿವಿದೋದ್ದೇಶ ಪ್ರಾಥಮಿಕ ಕೃಷಿ ಗ್ರಾಮೀಣ ಸಂಘದ ಅಧ್ಯಕ್ಷ ಕೆ.ವಿ.ದಯಾನಂದ ಎಚ್ಚರಿಸಿದರು.

ತಾಲ್ಲೂಕಿನ ಕಡಗಟ್ಟೂರು ಸೊಸೈಟಿ ಸಭಾಂಗಣದಲ್ಲಿ ಬುಧವಾರ ಮನೆ ನಿರ್ಮಾಣ, ಕುರಿಶೆಡ್ ನಿರ್ಮಾಣಕ್ಕೆ, ಹಳುಸಾಕಾಣಿಕೆ ಮನೆ, ಬೆಳೆಸಾಲ ಸುಮಾರು 30 ಲಕ್ಷ ರೂ ಸಾಲ ವಿತರಿಸಿ ಅವರು ಮಾತನಾಡಿ ಡಿಸಿಸಿ ಬ್ಯಾಂಕ್ ಈಗಾಗಲೇ ಗ್ರಾಹಕರಿಂದ ದೂರವಾಗಿದೆ. ನೀಡಲಾಗಿರುವ ಸಾಲ ವಸೂಲಿಯಲ್ಲಿ ಹಿಂದೆ ಉಳಿದು ಆರ್ಥಿಕ ಶಕ್ತಿ ಕಳೆದುಕೊಂಡಿದೆ ಎಂದು ದೂರಿದರು.

ಒಂದು ಕಾಲದಲ್ಲಿ ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಗಳ ರೈತರ, ಮಹಿಳೆಯರಿಗೆ ಆರ್ಥಿಕ ಶಕ್ತಿ ತುಂಬುವ ಪರಿಸ್ಥಿತಿಯಲ್ಲಿತ್ತು. ಈಗ ಶಕ್ತಿಯನ್ನು ಕಳೆದುಕೊಂಡಿದೆ. ಈ ಬಗ್ಗೆ ಮೊದಲಿನಿಂದಲೂ ಎಚ್ಚರಿಸುತ್ತಾ ಬಂದಿದ್ದರೂ ಯಾರು ಎಚ್ಚೆತ್ತುಕೊಳ್ಳಲಿಲ್ಲ ಎಂದು ಕಿಡಿಕಾರಿದರು.

ಯಾರ ಖಾತೆಯಲ್ಲಿ ಹಣ ಇದೆ ಎಂಬುದನ್ನು ಪರಿಶೀಲಿಸಿ ಗ್ರಾಹಕರ ಗಮನಕ್ಕೆ ಇಲ್ಲದೆ ಅಧಿಕಾರಿಗಳೇ ಸ್ವಯಂ ಡ್ರಾ ಮಾಡಿಕೊಳ್ಳುತ್ತಿದ್ದಾರೆ. ಆ ಮೂಲಕ ಠೇವಣಿದಾರರ ಖಾತೆಗೆ ಕನ್ನ ಹಾಕಿ, ಅನ್ನದಾತರ ಹೊಟ್ಟೆಗೆ ಬರೆ ಎಳೆಯುವ ಕೆಲಸ ಮಾಡುತ್ತಿದ್ದಾರೆ. ಹಗರಣದಲ್ಲಿ ಭಾಗಿಯಾಗಿರುವ ಅಧಿಕಾರಿಗೆ ಪೊಲೀಸ್ ಬೆತ್ತದ ರುಚಿ ತೋರಿಸಿ ದುರುಪಯೋಗ ಪಡಿಸಿಕೊಂಡಿರುವ ಹಣ ಮರು ಪಾವತಿ ಮಾಡಿಸಬೇಕೆಂದು ಒತ್ತಾಯಿಸಿದರು.

ಈ ಹಗರಣಗಳು ನಡೆಯುತ್ತಿರುವ ಬಗ್ಗೆ ಜನಪ್ರತಿನಿಧಿಗಳು, ಆಡಳಿತಾಧಿಕಾರಿಗಳ ಗಮನಕ್ಕೆ ಇದ್ದರು ಸಹ ಇಚ್ಛಾಶಕ್ತಿ ಕೊರತೆಯಿಂದ ಬ್ಯಾಂಕ್‌ನತ್ತ ಗಮನ ಹರಿಸುತ್ತಿಲ್ಲ. ಇನ್ನಾದರು ಎಚ್ಚೆತ್ತುಕೊಂಡು ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.ಸಂಘದ ಸ್ವಂತ ಬಂಡವಾಳದಿಂದಲೇ ಸಾಲ ಸೌಲಭ್ಯ ಕಲ್ಪಿಸಲಾಗುತ್ತಿದ್ದು, ಮಹಿಳಾ ಸಂಘಗಳಿಗೆ, ವೇತನ, ನಿವೇಶ, ಮನೆ ನಿರ್ಮಾಣ, ಹಸು ಸಾಲ, ಬೆಳೆ ಸಾಲ, ಮಾಧ್ಯಮಾವಧಿ ಸೇರಿದಂತೆ ಒಟ್ಟು 2.85 ಕೋಟಿ ರೂ. ಮೊತ್ತದ ಸಾಲ ಇದುವರೆಗೂ ವಿತರಣೆ ಮಾಡಲಾಗಿದ್ದು, ಪ್ರಾಮಾಣಿಕವಾಗಿ ಮರುಪಾವತಿ ಮಾಡುವ ಮೂಲಕ ಸಂಘಕ್ಕೆ ಶಕ್ತಿ ತುಂಬಿದ್ದಾರೆ. ಮಹಿಳಾ ಸ್ತ್ರೀ ಶಕ್ತಿ ಸ್ವಸಹಾಯ ಸಂಘಗಳಿಗೆ, ಕುರಿ ಶೇಡ್, ನಿವೇಶನ, ಸಾಗಾಣಿಕೆ, ಮನೆ ನಿರ್ಮಾಣಕ್ಕೆ ಬೆಳೆ ಸಾಲ ಒಟ್ಟು 60 ಲಕ್ಷ ರೂ ವಿತರಣೆ ಮಾಡಲಾಗುತ್ತಿದೆ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಉಪಾಧ್ಯಕ್ಷ ಮಂಜುನಾಥ್, ಸೋಮಶೇಖರ್, ರಮೇಶ್, ಎಂ.ಬೈಯ್ಯಣ್ಣ, ಬಿ.ಎಂ.ರಾಮೇಗೌಡ, ಕುಮಾರಚಾರಿ, ಮುನಿಕೃಷ್ಣಪ್ಪ, ಸುರೇಶ್, ಸಿ.ಡಿ.ರಾಮು ಚಂದ್ರೇಗೌಡ, ಗೋಪಾಲಕೃಷ್ಣ, ರಾಜಣ್ಣ, ಸಿಇಒ ಮುನೀಶ್ವರಪ್ಪ ಉಪಸ್ಥಿತರಿದ್ದರು.

# ಕಾರ್ಮಿಕರ ವಿರೋಧಿ ನೀತಿಗಳ ವಿರುದ್ಧ ಬೃಹತ್ ಪ್ರತಿಭಟನೆ

**ಕೋಲಾರ, 13–** ಕೇಂದ್ರ ಸರ್ಕಾರ ಜಾರಿಗೊಳಿಸಿರುವ ನಾಲ್ಕು ಕಾರ್ಮಿಕರ ವಿರೋಧಿ ನೀತಿಗಳ ವಿರುದ್ಧ ಕಾರ್ಮಿಕ ಸಂಘಗಳ ಜಂಟಿ ಸಮಿತಿ ಹಾಗೂ ಸಂಯುಕ್ತ ಹೋರಾಟ ಕರ್ನಾಟಕ ವತಿಯಿಂದ ಗುರುವಾರ ಕರೆ ನೀಡಿದ್ದ ಅಖಿಲ ಭಾರತ ಸಾರ್ವತ್ರಿಕ ಮುಷ್ಕರದ ಭಾಗವಾಗಿ ನಗರದ ಗಾಂಧಿವನದಿಂದ ಮೆರವಣಿಗೆ ನಡೆಸಿ ತಹಶಿಲ್ದಾರ್ ಕಛೇರಿ ಮುಂದೆ ಬೃಹತ್ ಪ್ರತಿಭಟನೆ ನಡೆಸಿದರು.



ಈ ಸಂದರ್ಭದಲ್ಲಿ ಹಿರಿಯ ಕಾರ್ಮಿಕ ಮುಖಂಡ ಗಾಂಧಿನಗರ ನಾರಾಯಣಸ್ವಾಮಿ ಮಾತನಾಡಿ ದೇಶದಲ್ಲಿ ಕಾರ್ಮಿಕರ ಹಕ್ಕುಗಳಿಗಾಗಿ ಇದ್ದ 29 ಕಾರ್ಮಿಕ ಕಾಯ್ದೆಗಳನ್ನು 4 ಕಾರ್ಮಿಕ ಕೋಡ್‌ಗಳಾಗಿ ಜಾರಿಗೊಳಿಸಿದ್ದಾರೆ ಕಾರ್ಮಿಕರು ಮುಷ್ಕರ ನಡೆಸಿದರೆ ದಂಡ, ಜೈಲು ಶಿಕ್ಷೆ, ವೇತನ ಕಡಿತಗೊಳಿಸಲಾಗುವ ನೀತಿಗಳು ಜಾರಿ ಮಾಡಿದ್ದಾರೆ. ನರೇಗಾದಡಿ ಕೆಲಸದ ಹಕ್ಕನ್ನು ಕಸೆದುಕೊಂಡು ಗ್ರಾಮೀಣ ಜನರ ದುಡಿಯುವ ಹಕ್ಕನ್ನು ನಿಯಂತ್ರಣ ಮಾಡುವ ಮೂಲಕ ಗ್ರಾಮೀಣ ಜನರ ಜೀವನ ಕಸೆದುಕೊಂಡು ಬೀದಿ ಪಾಲಾಗುವಂತೆ ಮಾಡುತ್ತಿದ್ದಾರೆ ಎಂದು ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಸಿಐಟಿಯು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ.ವಿಜಯಕೃಷ್ಣ ಮಾತನಾಡಿ ದೇಶದಲ್ಲಿ ಮೋದಿ ಸರ್ಕಾರ ಅಧಿಕಾರಕ್ಕೆ ಬಂದ ನಂತರ ವಿದ್ಯುಚ್ಛಕ್ತಿ ಖಾಸಗೀಕರಣ, ಪ್ರಸರಣ ಮತ್ತು ಅನುಷ್ಠಾನ ನಿರ್ವಹಣೆ ಖಾಸಗಿ ಬಂಡವಾಳಗಾರರಿಗೆ ನೀಡುವ ಮೂಲಕ ರೈತರು, ಜನ ಸಾಮಾನ್ಯರ ಸಬ್ಸಿಡಿಗೆ ಮೋಸ ಮಾಡಿದ್ದಾರೆ ರೈತರ ಉತ್ಪನ್ನಗಳಿಗೆ ಬೆಂಬಲ ಬೆಲೆ ನೀಡದೇ ಕೃಷಿಯನ್ನು ಉತ್ತೇಜಿಸದೇ ಭೂ ಸ್ವಾದೀನ ಕಾಯ್ದೆ ಮೂಲಕ ರೈತ ಜಮೀನು ಕಸಿದುಕೊಳ್ಳುವ ಹುನ್ನಾರ ಮಾಡಿದ್ದಾರೆ ಇದನ್ನು ವಿರೋಧವನ್ನು ವ್ಯಕ್ತಪಡಿಸಬೇಕಾಗಿದೆ ಎಂದರು.

ಈ ಸಂದರ್ಭದಲ್ಲಿ ರೈತ ಸಂಘದ ರಾಜ್ಯ ಕಾರ್ಯಾಧ್ಯಕ್ಷ ಅಬ್ಬಣಿ ಶಿವಪ್ಪ ಮಾತನಾಡಿ ನರೇಗಾ ಯೋಜನೆಯನ್ನು ಪುನರ್ ಸ್ಥಾಪಿಸಿ, ವಿ.ಜಿ ಗ್ರಾಮ್ ಜಿ ಕಾಯ್ದೆ ರದ್ದುಗೊಳಿಸಬೇಕು, ಭೂ ಸ್ವಾಧೀನ ಕಾಯ್ದೆಯನ್ನು ಹಿಂಪಡೆದು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ತಂದಿರುವ ಭೂಸುಧಾರಣಾ, ಎಪಿಎಂಸಿ, ಜಾನುವಾರು ಸಂರಕ್ಷಣಾ ತಿದ್ದುಪಡಿ ಕಾಯ್ದೆಗಳು ಸೇರಿದಂತೆ ವಿದ್ಯುಚ್ಛಕ್ತಿ ಖಾಸಗೀಕರಣ ಮಾಡುವುದನ್ನು ನಿಲ್ಲಿಸಬೇಕು. ಬೀಜ ಮಸೂದೆ ಕಾಯ್ದೆಯನ್ನು ವಾಪಸು ಮಾಡುವ ಜೊತೆಗೆ ಕಾರ್ಮಿಕರ ನಾಲ್ಕು ಕೋಡ್ ಗಳನ್ನು ಜಾರಿ ಮಾಡಲು ಯಾವುದೇ ಕಾರಣಕ್ಕೂ ಬಿಡಬಾರದು ಎಂದು ತಿಳಿಸಿದರು

ಈ ಸಂದರ್ಭದಲ್ಲಿ ಕೆ.ಪಿ.ಆರ್.ಎಸ್ ಜಿಲ್ಲಾಧ್ಯಕ್ಷ ಟಿ.ಎಂ ವೆಂಕಟೇಶ್ ಮಾತನಾಡಿ ಕರ್ನಾಟಕ ಸರ್ಕಾರ ಕಾರ್ಮಿಕ ಸಂಹಿತೆಗಳಿಗೆ ಈಗ ತಂದಿರುವ ಗೆಜೆಟ್ ನೋಟಿಫಿಕೇಷನ್‌ನ್ನು ವಾಪಸ್ಸು ಪಡೆಯಬೇಕು. ಮತ್ತು ಒಕ್ಕೂಟ ಸರ್ಕಾರ ತಂದಿರುವ ಜನವಿರೋಧಿ ಮಸೂದೆಗಳನ್ನು ವಿರೋಧಿಸಬೇಕು. 2025 ಆಗಸ್ಟ್ ತಿಂಗಳಲ್ಲಿ ಕನಿಷ್ಠ ವೇತನ ಹೆಚ್ಚಳದ ಕುರಿತು ಕನಿಷ್ಠ ವೇತನ ಸಲಹಾ ಮಂಡಳಿ ನೀಡಿರುವ ಶಿಫಾರಸ್ಸನ್ನು ಅಂತಿಮ ಅಧಿಸೂಚನೆಯಾಗಿ ಹೊರಡಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಹೆಚ್.ಬಿ ಕೃಷ್ಣಪ್ಪ, ಎಂ. ಭೀಮರಾಜ್, ಎನ್.ಕಲ್ಪನಾ, ಆಶಾ, ವಿ.ಮಂಜುಳ, ಲಕ್ಷ್ಮಿದೇವಿ, ರಾಜಮ್ಮ, ರಾಮಚಂದ್ರಪ್ಪ, ವಿಜಯಕುಮಾರ್, ಅಂಜನಪ್ಪ, ನಿಕಿಲ್, ಶಿವಕುಮಾರ್, ಪೃಥ್ವಿ, ಮೂರ್ತಿ, ರಮೇಶ್, ನಾರಾಯಣರೆಡ್ಡಿ, ಶಾಂತಮ್ಮ, ಬುಟ್ಟಾಲ ಗಣೇಶ್, ಎಂ.ಶ್ರೀನಿವಾಸ್, ನವೀನ್ ಕುಮಾರ್, ಮುಂತಾದವರು ಇದ್ದರು,

## ಸತ್ಯ ಸಾಯಿ ವಿದ್ಯಾ ನಿಕೇತನಂನಲ್ಲಿ ಭವ್ಯವಾಗಿ ನೆರವೇರಿದ ವಾರ್ಷಿಕ ಕ್ರೀಡಾ ಹಾಗೂ ಸಾಂಸ್ಕೃತಿಕೋತ್ಸವ–2026ರ ಸಮಾರೋಪ

**ಕಮಲಾಪುರ :ಫೆ.13–** ಸತ್ಯ ಸಾಯಿ ವಿದ್ಯಾ ನಿಕೇತನಂ ವತಿಯಿಂದ ಆಯೋಜಿಸಲಾಗಿದ್ದ ವಾರ್ಷಿಕ ಕ್ರೀಡಾ ಹಾಗೂ ಸಾಂಸ್ಕೃತಿಕೋತ್ಸವ–2026ರ ಸಮಾರೋಪ ಸಮಾರಂಭವು ಇಂದು ಅತ್ಯಂತ ಶಿಸ್ತುಬದ್ಧ ಹಾಗೂ ಸಂಭ್ರಮಭರಿತ ವಾತಾವರಣದಲ್ಲಿ ಭವ್ಯವಾಗಿ ನೆರವೇರಿತು.




ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಶ್ರೀ ಅಡ್ಡೂರು ಶ್ರೀನಿವಾಸಲು, ಐಪಿಎಸ್, ಪೊಲೀಸ್ ಅಧೀಕ್ಷಕರು, ಕಲಬುರಗಿ ಭಾಗವಹಿಸಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು , ಪ್ರೋ. ಶ್ರೀಕಂಠ ಮೂರ್ತಿ ಉಪಕುಲಪತಿಗಳು ,ಸತ್ಯ ಸಾಯಿ ವಿಶ್ವವಿದ್ಯಾಲಯ ವಹಿಸಿದ್ದರು.ಸಮಾರಂಭದಲ್ಲಿ ವಿವಿಧ ಕ್ರೀಡಾ ಸ್ಪರ್ಧೆಗಳು ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ಹಾಗೂ ಪ್ರಶಸ್ತಿ ಪತ್ರಗಳನ್ನು ವಿತರಣೆ ಮಾಡಲಾಯಿತು.

ಮುಖ್ಯ ಅತಿಥಿಯಾಗಿ ಮಾತನಾಡಿದ ಶ್ರೀ ಅಡ್ಡೂರು ಶ್ರೀನಿವಾಸಲು, ಐಪಿಎಸ್ ಅವರು,

“ಕ್ರೀಡೆಯಲ್ಲಿ ಗೆಲುವು–ಸೋಲು ಮುಖ್ಯವಲ್ಲ, ಆದರೆ ಕ್ರೀಡೆಯಿಂದ ನಾವು ಏನು ಕಲಿಯುತ್ತೇವೆ ಎಂಬುದೇ ಮುಖ್ಯ. ಶಿಸ್ತು, ಸಹನೆ, ತಂಡಭಾವನೆ, ನಾಯಕತ್ವ, ಆತ್ಮವಿಶ್ವಾಸ ಇವುಗಳೆಲ್ಲವೂ ಕ್ರೀಡೆಯಿಂದ ವಿದ್ಯಾರ್ಥಿಗಳಲ್ಲಿ ಬೆಳೆಯುತ್ತವೆ. ಈ ಸಂಸ್ಥೆಯಲ್ಲಿ ವಿದ್ಯಾರ್ಥಿಗಳು ಕಲಿಯುವ ಮೌಲ್ಯಗಳು ಹಾಗೂ ಸಂಸ್ಕಾರಗಳು ಜೀವನಪೂರ್ತಿ ನಿಮ್ಮೊಂದಿಗೆ ಕೊಂಡು ಒಯ್ಯಬೇಕು ಎಂದು ಹೇಳಿದರು.

ಇನ್ನೂ ಮುಂದುವರಿದು ಮಾತನಾಡಿದ ಅವರು,“ಇಂದಿನ ಸಮಾಜದಲ್ಲಿ ಸೈಬರ್ ಅಪರಾಧಗಳು ದಿನೇದಿನೇ ಹೆಚ್ಚಾಗುತ್ತಿವೆ. ಅತ್ಯಂತ ವಿದ್ಯಾವಂತರು, ಬುದ್ಧಿವಂತರೇ ಕೆಲವೊಮ್ಮೆ ಇಂತಹ ಅಪರಾಧಗಳಲ್ಲಿ ತೊಡಗಿಕೊಳ್ಳುತ್ತಿರುವುದು ಆತಂಕಕಾರಿ ಸಂಗತಿ. ಇದಕ್ಕೆ ಕಾರಣವಾಗಿ ನೈತಿಕ ಹಾಗೂ ಧಾರ್ಮಿಕ ಮೌಲ್ಯಾಧಾರಿತ ಶಿಕ್ಷಣದ ಕೊರತೆ ಕಾಣಿಸುತ್ತಿದೆ. ಆದ್ದರಿಂದ ಇಂದಿನ ಕಾಲದಲ್ಲಿ ಮೌಲ್ಯಾಧಾರಿತ, ನೈತಿಕ ಹಾಗೂ ಧಾರ್ಮಿಕ ಶಿಕ್ಷಣ ಅತ್ಯಾವಶ್ಯಕ. ವಿದ್ಯಾರ್ಥಿಗಳು ಇದನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು” ಎಂದು ಕರೆ ನೀಡಿದರು.

ಅಧ್ಯಕ್ಷೀಯ ಭಾಷಣದಲ್ಲಿ ಪ್ರೋ. ಶ್ರೀಕಂಠ ಮೂರ್ತಿ ಉಪಕುಲಪತಿಗಳು ಮಾತನಾಡುತ್ತಾ “ಶಿಕ್ಷಣವು ಕೇವಲ ಅಂಕಗಳಿಗೆ ಸೀಮಿತವಾಗಿರಬಾರದು. ಮೌಲ್ಯಗಳು, ಸೇವಾಭಾವ, ಶಿಸ್ತು ಮತ್ತು ಮಾನವೀಯತೆಗಳೊಂದಿಗೆ ವಿದ್ಯಾರ್ಥಿಗಳನ್ನು ರೂಪಿಸುವುದೇ ಸತ್ಯ ಸಾಯಿ ಶಿಕ್ಷಣ ಪದ್ಧತಿಯ ಮೂಲ ಉದ್ದೇಶ. ಕ್ರೀಡೆಗಳು ವಿದ್ಯಾರ್ಥಿಗಳ ಸವಾರ್ಂಗೀಣ ಅಭಿವೃದ್ಧಿಗೆ ಬಲವಾದ ವೇದಿಕೆಗಳಾಗಿವೆ” ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರು, ಅಧ್ಯಾಪಕರು, ಸಿಬ್ಬಂದಿ ವರ್ಗ, ಪಾಲಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಸಮಾರೋಪ ಸಮಾರಂಭವು ಅತ್ಯಂತ ಸುವ್ಯವಸ್ಥಿತವಾಗಿ, ಶಿಸ್ತಿನೊಂದಿಗೆ ಹಾಗೂ ಸಂಭ್ರಮಭರಿತವಾಗಿ ನೆರವೇರಿದ್ದು, ರಾಷ್ಟ್ರಗೀತೆಯೊಂದಿಗೆ ಮುಕ್ತಾಯವಾಯಿತು.

# ನಾಗಠಾಣ ಮಾದರಿ ಮತಕ್ಷೇತ್ರದ ಅಭಿವೃದ್ಧಿ ಕನಸು: ಶಾಸಕ ವಿಠ್ಠಲ ಕಟ್ಟಕಧೋಂಡ



**ಚಡಚಣ , ಫೆ. 13 :** ಮತಕ್ಷೇತ್ರದ ಜನರಿಗೆ ನೀರು, ರಸ್ತೆ, ವಿದ್ಯುತ್ ಸಂಪರ್ಕ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಗುರಿಯನ್ನು ಇಟ್ಟುಕೊಂಡು ಮತಕ್ಷೇತ್ರದ ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇನೆ ಎಂದು ಶಾಸಕ ವಿಠ್ಠಲ ಕಟ್ಟಕಧೋಂಡ ಹೇಳಿದರು.

ನಾಗಠಾಣ ಮತಕ್ಷೇತ್ರದ ಹದಗೆಟ್ಟ ರಸ್ತೆಗಳು ನೋಡಿ ಕ್ಷೇತ್ರದ ಜನತೆಗೆ ಚುನಾವಣೆ ಪೂರ್ವದಲ್ಲಿ ಮಾತು ಕೊಟ್ಟಿದೆ. ನನ್ನ ಅವಧಿಯಲ್ಲಿ ಮೊದಲು ಅವಶ್ಯಕತೆ ಇರುವ ಕಡೆಗೆ ರಸ್ತೆ ಸುಧಾರಣೆಗೆ ಪ್ರಯತ್ನ ಮಾಡುತ್ತೇನೆ ಎಂದು. ಈಗ ಚಡಚಣ ತಾಲೂಕಿನ ಬಹುತೇಕ 80 ಪ್ರತಿಶತ ಗ್ರಾಮಗಳ ರಸ್ತೆ ಕಾಮಗಾರಿ ಮುಕ್ತಾಯ ಮತ್ತು ಪ್ರಗತಿಯಲ್ಲಿವೆ ಎಂದು ಹೇಳಿದರು.

ಗ್ರಾಮಸ್ಥರು ಒಂದು ಗ್ರಾಮದಿಂದ ಗ್ರಾಮಕ್ಕೆ ವ್ಯಾಪಾರ ವಹಿವಾಟ, ನಡೆಸಲು, ಸಗಟು ಸಾಗಟ, ಮತ್ತು ಶಾಲಾ ಕಾಲೇಜುಗಳಿಗೆ ವಿದ್ಯಾರ್ಥಿಗಳು ಸುಗಮ ಸಂಚಾರಕ್ಕೆ ಒಳ್ಳೆಯ ರಸ್ತೆಗಳು ಇದ್ದಾಗ ಮಾತ್ರ ಮತಕ್ಷೇತ್ರದ ಅಭಿವೃದ್ಧಿ ಹೊಂದಲು ಸಾಧ್ಯ ಎಂದು ಹೇಳಿದರು.

ಚಡಚಣ ತಾಲೂಕಿನ ಹಲಸಂಗಿ ಗ್ರಾಮದಿಂದ ಏಳಗಿ ಗ್ರಾಮದ ರಾಷ್ಟ್ರೀಯ ಹೆದ್ದಾರಿ 52 ರವರಗೆ 2 ಕೋಟಿ ರೂ, ಲೋಣಿ ಬಿ ಕೆ ಗ್ರಾಮದಿಂದ ಗೊಟ್ಯಾಳ ಗ್ರಾಮದವರಗೆ 2 ಕೋಟಿ ರೂ, ಚಡಚಣದಿಂದ ಕನ್ನೂರ ಗ್ರಾಮದ ರಾಹೆ–258 ವರಗೆ 2 ಕೋಟಿ ರೂ, ಹಾಲಹಳ್ಳಿ ಗ್ರಾಮದಿಂದ ರಾಜ್ಯ ಹೆದ್ದಾರಿ 41 ಕ್ಕೆ ಕೋಡುವ ರಸ್ತೆ ಸುದಾರಣೆಗೆ 60 ಲಕ್ಷ ರೂ, ಹಾಲಹಳ್ಳಿ ಗ್ರಾಮದ ಪ.ಜಾ ಕಾಲೋನಿಯಲ್ಲಿ 50 ಲಕ್ಷ ರೂ, ಸಿಸಿ ರಸ್ತೆ ಸೇರಿದಂತೆ ಒಟ್ಟು 7. ಕೋಟಿ 10 ಲಕ್ಷ ರೂಗಳ ಕಾಮಗಾರಿಗೆ ಭೂಮಿ ಪೂಜೆ ನೇರವೇರಿಸಿದರು.

ಈ ವೇಳೆ ವಿಜಯಪುರ ಕೆ.ಆರ್.ಐ.ಡಿ.ಎಲ್ ಅಧಿಕಾರಿ, ರಾಜೇಂದ್ರ ಹೂಗಾರ, ಚಡಚಣ ಪಪಂ ಉಪಾಧ್ಯಕ್ಷ ಇಲಾಯಿ ನದಾಫ, ಸಬೀರ್ ನದಾಫ, ವಾಸಿಂ ಮುಲ್ಲಾ, ಸೈದು ಕೊಡಹೊನ, ಸಿದ್ದಲಿಂಗ ಬನಸೋಡೆ, ದೇವಾನಂದ ಸಿಂಗೆ, ರಾಜು ನಿಂಬರಗಿ, ಮಾಜಿ ತಾಪಂ ಸದಸ್ಯ ಪ್ರಕಾಶಗೌಡ ಪಾಟೀಲ, ಶ್ರೀಮಂತ ಕುಂಬಾರ, ಸುರೇಶ ಮಾಶ್ಯಾಳ, ಮಹೇಶ ಸುಸುಲಾದ, ಶ್ರೀಕಾಂತ ಸುಸಲಾದ, ಸಿದ್ದು ಇಂಗಳಗಿ, ದೇವೆಂದ್ರ ಪಾಟೀಲ, ಶಿವರಾಜ ಪಾಟೀಲ ದಯಾನಂದ ಪಾಟೀಲ, ಸೋಮು ಕತ್ನಾಳ್ಳಿ, ಅನೇಕರು ಇದ್ದರು.

# ಫೆಬ್ರವರಿ ಮಾಹೆಗೆ ಪಡಿತರ ಧಾನ್ಯ ವಿತರಣೆ: ಜಿಲ್ಲಾಧಿಕಾರಿ ನಿತೀಶ್ ಕೆ.

**ರಾಯಚೂರು ಫೆ,13–** ಇಲ್ಲಿಯ ಜಿಲ್ಲಾ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ 2026ರ ಫೆಬ್ರವರಿ ಮಾಹೆಗೆ ಪಡಿತರ ಧಾನ್ಯಗಳನ್ನು ವಿತರಣೆ ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

ಜಿಲ್ಲೆಯ ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ(ಎಎವೈ) ಪಡಿತರ ಚೀಟಿಗೆ 35 ಕೆ.ಜಿ ಸಾರವರ್ಧಿತ ಅಕ್ಕಿ ಹಾಗೂ ಕೇಂದ್ರ ವ್ಯಾಪ್ತಿಯ ಪಿ.ಹೆಚ್.ಹೆಚ್(ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 05 ಕೆ.ಜಿ ಸಾರವರ್ಧಿತ ಅಕ್ಕಿ ಇದರ ಜೊತೆಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ರಾಜ್ಯ ಸರ್ಕಾರದ ಮಾರ್ಗಸೂಚಿಯಂತೆ ಏಕ ಸದಸ್ಯ, ದ್ವಿ ಸದಸ್ಯ ಮತ್ತು ತ್ರಿ ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಕೇಂದ್ರ & ರಾಜ್ಯ ವ್ಯಾಪ್ತಿಯ ಅಂತ್ಯೋದಯ(ಎಎವೈ) ಮತ್ತು ಪಿ.ಹೆಚ್.ಹೆಚ್(ಬಿಪಿಎಲ್) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು.

ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ/ ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ದೂರವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಛೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಛೇರಿಗೆ ದೂರನ್ನು ಸಲ್ಲಿಸಬಹುದಾಗಿದೆ.

ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಈ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದ್ವಿತೀಯ ಮೇಲ್ಮನವಿ ಆರ್‌ಟಿಐ ಅರ್ಜಿಗಳನ್ನು ಕಲ್ಬುರ್ಗಿ ಪೀಠಕ್ಕೆ ಸಲ್ಲಿಸಲು ಅವಕಾಶ

**ರಾಯಚೂರು ಫೆ,13–** ಕಲ್ಯಾಣ ಕರ್ನಾಟಕ ಭಾಗದ ಏಳು ಜಿಲ್ಲೆಗಳ ವ್ಯಾಪ್ತಿ ಹೊಂದಿದ ಕರ್ನಾಟಕ ಮಾಹಿತಿ ಆಯೋಗದ ಕಲ್ಬುರ್ಗಿ ಪೀಠದಲ್ಲಿ ಮಾಹಿತಿ ಹಕ್ಕು ಕಾಯ್ದೆ 2005, ಕಲಂ 19(3) ರನ್ವಯ ಸಲ್ಲಿಕೆಯಾಗುವ ದ್ವಿತೀಯ ಮೇಲ್ಮನವಿ ಅರ್ಜಿಗಳನ್ನು ಇನ್ಮುಂದೆ ಕಲ್ಬುರ್ಗಿ ಪೀಠದಲ್ಲಿ ಸ್ವೀಕರಿಸಲಾಗುವುದು ಎಂದು ಆಯೋಗವು ಪ್ರಕಟಣೆಯಲ್ಲಿ ತಿಳಿಸಿದೆ.

ಈ ಮುಂಚೆ ಕಲಬುರಗಿ, ಬೀದರ್, ರಾಯಚೂರು, ಬಳ್ಳಾರಿ, ಕೊಪ್ಪಳ ವಿಜಯನಗರ ಯಾದಗಿರಿ ಜಿಲ್ಲೆಗಳು ವ್ಯಾಪ್ತಿಯಲ್ಲಿನ ದ್ವಿತೀಯ ಮೇಲ್ಮನವಿಗಳನ್ನು ಬೆಂಗಳೂರಿನ ಕರ್ನಾಟಕ ಮಾಹಿತಿ ಆಯೋಗದಲ್ಲಿ ಸಲ್ಲಿಸಬೇಕಿತ್ತು. ಆದರೆ, ಸಾರ್ವಜನಿಕರಿಗೆ ಅನುಕೂಲವಾಗುವ ದೃಷ್ಟಿಯಿಂದ ಹಾಗೂ ಪ್ರಕರಣಗಳ ಶೀಘ್ರ ವಿಲೇವಾರಿಗೆ ಅನುಕೂಲವಾಗಲು ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಅರ್ಜಿದಾರರು ತಮ್ಮ ಮಾಹಿತಿ ಹಕ್ಕು ಕಾಯ್ದೆ, 2005ರ ಕಲಂ 19(3) ದ್ವಿತೀಯ ಮೇಲ್ಮನವಿ ಅರ್ಜಿಗಳನ್ನು ಇನ್ಮುಂದೆ ಕರ್ನಾಟಕ ಮಾಹಿತಿ ಆಯೋಗ, ಕಲ್ಬುರ್ಗಿ ಪೀಠ, ಮಹಲ್–ಎ–ಶಾಹಿ ಅತಿಥಿ ಗೃಹ, ಹಳೆಯ ಪಿ.ಡಬ್ಲ್ಯೂ.ಡಿ.ಐ.ಬಿ ಅವರಣ, ರೈಲ್ವೆ ಸ್ಟೇಷನ್ ಎದುರುಗಡೆ ಕಲಬುರಗಿ ಇಲ್ಲಿ ಸಲ್ಲಿಸಬಹುದಾಗಿದೆ ಎಂದು ಪೀಠದ ಶಾಖಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸುರಕ್ಷಿತ, ಜವಾಬ್ದಾರಿಯುತ ಅಂತರ್ಜಾಲ ಬಳಕೆ ಅತಿಮುಖ್ಯ: ಹಾಲಸಿದ್ದಪ್ಪ ಪೂಜಾರಿ ಸಲಹೆ

ಯುವಮಾರ್ಗ ಸುದ್ದಿ

**ರಾಯಚೂರು ಫೆ,13–**ಪ್ರಸ್ತುತ ಸನ್ನಿವೇಶದಲ್ಲಿ ಬಹುತೇಕ ಎಲ್ಲ ವಲಯಗಳಲ್ಲಿ ಅಂತರ್ಜಾಲ ಬಳಕೆಯಾಗುತ್ತಿದೆ. ಸುರಕ್ಷಿತ ಮತ್ತು ಜವಾಬ್ದಾರಿ ಯುತ ಬಳಕೆಯ ಬಗ್ಗೆ ಪ್ರತಿಯೊಬ್ಬರು ಎಚ್ಚರ ವಹಿಸಬೇಕು ಎಂದು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳಾದ ಹಾಲಸಿದ್ದಪ್ಪ ಪೂಜಾರಿ ಅವರು ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಮಾಹಿತಿ ತಂತ್ರಜ್ಞಾನ (ಎನ್‌ಐಸಿ) ರಾಯಚೂರು ಇವರ ಸಹಯೋಗದಲ್ಲಿ ಇತ್ತೀಚೆಗೆ ಹಮ್ಮಿಕೊಳ್ಳಲಾಗಿದ್ದ ಸುರಕ್ಷಿತ ಅಂತರ್ಜಾಲ ದಿನ-2026ರ ಕಾರ್ಯಾಗಾರದಲ್ಲಿ ಸಸಿಗೆ ನೀರುಣಿಸಿ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿ ಸೈಬರ್ ಸುರಕ್ಷತೆಯನ್ನು ತಮ್ಮ ದಿನನಿತ್ಯದ ಕಾರ್ಯಗಳಲ್ಲಿ ಅಳವಡಿಸಿಕೊಳ್ಳಬೇಕು. ಬ್ಯಾಂಕಿಂಗ್, ಇ-ಆಫೀಸ್, ಆನ್‌ಲೈನ್ ತರಗತಿ, ಮೀಟಿಂಗ್‌ಗಳು ಹೀಗೆ ಎಲ್ಲೆಡೆ ಅಂತರ್ಜಾಲ ಬಳಕೆ ವ್ಯಾಪಕವಾಗಿದೆ. ಅದೇ ರೀತಿ ಸೈಬರ್ ಅಪರಾಧಗಳೂ ಹೆಚ್ಚುತ್ತಿವೆ ಎಂದರು.

ಅಕ್ಷರಸ್ಥರೇ ಹೆಚ್ಚಿನ ಸಂಖ್ಯೆಯಲ್ಲಿ ಸೈಬರ್ ಅಪರಾಧಗಳಲ್ಲಿ ಭಾಗಿಯಾಗುತ್ತಿದ್ದಾರೆ. ಸೈಬರ್ ವಂಚನೆಯ ಮೂಲಕ ಕೋಟಿಗಟ್ಟಲೆ ಹಣವನ್ನು ಖಾತೆಗಳಿಂದ ಕಬಳಿಸಲಾಗುತ್ತಿದೆ. ಆದ್ದರಿಂದ ಪ್ರತಿಯೊಬ್ಬರೂ ಸುರಕ್ಷಿತ ಅಂತರ್ಜಾಲ ಬಳಕೆ ಬಗ್ಗೆ ತಿಳಿದುಕೊಳ್ಳಬೇಕು. ವಂಚನೆಗೆ ಒಳಗಾದಲ್ಲಿ ತಕ್ಷಣ ಹತ್ತಿರದ ಪೊಲೀಸ್ ಠಾಣೆಯಲ್ಲಿ ದೂರು




ನೀಡಬೇಕು ಎಂದರು. ಈ ವೇಳೆ ವೈರ್‌ಲೆಸ್ ಪಿಎಸ್‌ಐ ಮಹೇಶ ಅವರು ಮಾತನಾಡಿ, ಕಚೇರಿಗಳಲ್ಲಿ ಲಾಗಿನ್ ಮಾಹಿತಿಗ 'ಳನ್ನು ಸುರಕ್ಷಿತವಾಗಿ ಇಟ್ಟುಕೊಳ್ಳಬೇಕು. ಬಳಕೆ ನಂತರ ಕಡ್ಡಾಯವಾಗಿ ಲಾಗ್‌ಔಟ್ ಮಾಡಬೇಕು. ಮಕ್ಕಳು, ಹದಿಹರೆಯದವರು ಕಲಿಕೆ, ಮನರಂಜ ನೆಗಾಗಿ ಇಂದು ಹೆಚ್ಚಾಗಿ ಅಂತರ್ಜಾಲ ಬಳಸುತ್ತಿ ದ್ದಾರೆ. ವಂಚಕರು ಮೊಬೈಲ್‌ಗೆ ಕರೆ ಮಾಡಿ ನೀವು ಕಳುಹಿಸಿದ ಕೋರಿಯರ್ ಪಾರ್ಸಲ್‌ಗಳಲ್ಲಿ ಮಾದಕ ವಸ್ತು, ನಕಲಿ ಪಾಸ್‌ಪೋರ್ಟ್ ಇದೆ. ನಿಮ್ಮ ವಿರುದ್ಧ ಬೇರೆ ರಾಜ್ಯಗಳಲ್ಲಿ ದೂರು ದಾಖಲಾಗಿದೆ ಎಂದು ಬೆದರಿಸಿ ಡಿಜಿಟಲ್ ಅರೆಸ್ಟ್ ಮಾಡಿ ತಮ್ಮ ಖಾತೆಗೆ ಹಣ ಹಾಕಿಸಿಕೊಳ್ಳುವ ವಂಚಕರಿದ್ದಾರೆ ಎಂದು ಎಚ್ಚರಿಸಿದರು.

ಇ-ಕೆವೈಸಿ ಅಪ್‌ಡೇಟ್ ಹೆಸರಿನಲ್ಲಿ ನೈಜ ಬ್ಯಾಂಕಿಂಗ್ ಅಪ್ಲಿಕೇಶನ್‌ಗಳಂತೆ ಕಾಣುವ ಎಪಿಕೆ ಫೈಲ್ ಕಳುಹಿಸಿ ವಂಚಿಸುವುದು, ನಕಲಿ ಹೂಡಿಕೆ ಅಪ್ಲಿಕೇಷನ್ ಬಳಸಿ ಕಡಿಮೆ ಅವಧಿಯಲ್ಲಿ ಹೆಚ್ಚಿನ ಆದಾಯ ನೀಡುವ ಭರವಸೆ ನೀಡಿ ವಂಚಿಸಲಾಗುತ್ತಿದೆ ಎಂದರು. ಈ ವೇಳೆ ಎನ್‌ಐಸಿನ ಹಿರಿಯ ನಿರ್ದೇಶಕರು ಹಾಗೂ ಜಿಲ್ಲಾ ಸಂಯೋಜಕರಾದ ಟಿ.ಕೆ.ರಾಘವೇ ಂದ್ರ ಅವರು ಮಾತನಾಡಿ, ಚತುರ ತಂತ್ರಜ್ಞಾನ, ಸುರಕ್ಷಿತ ಆಯ್ಕೆಗಳು, ಎಐನ ಸುರಕ್ಷಿತ ಮತ್ತು ಜವಾಬ್ದಾರಿಯುತ ಬಳಕೆಯನ್ನು ಅನ್ವೇಷಿಸುವುದು ಎಂಬುದು ಈ ವರ್ಷದ ಸುರಕ್ಷಿತ ಅಂತರ್ಜಾಲ ಬಳಕೆ ದಿನದ ಘೋಷವಾಕ್ಯ. ಅಂತರ್ಜಾಲ ವಂಚನೆ ಕುರಿತು ಜಾಗೃತಿ ಮೂಡಿಸುವುದು ಹಾಗೂ ಸುರಕ್ಷಿತ ಅಂತರ್ಜಾಲ ಬಳಕೆ ಬಗ್ಗೆ ತಿಳಿವಳಿಕೆ ಮೂಡಿಸು ವುದು ಈ ದಿನದ ಮುಖ್ಯ ಉದ್ದೇಶ ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ಡಾ.ವಿಜಯಶಂಕರ್, ಜಿಲ್ಲಾಧಿಕಾರಿಗಳ ಕಚೇರಿಯ ತಹಶೀಲ್ದಾರ್ ಜಗದ್ದೀಶ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಇದ್ದರು. ನರೇಗಾ ಜಿಲ್ಲಾ ಸಮನ್ವಯ ಅಧಿಕಾರಿ ಮಲ್ಲಮ್ಮ ನಿರೂಪಿಸಿದರು.

# ಇಕೋ ಪಾರ್ಕ್, ಅಂಗನವಾಡಿ ಕೇಂದ್ರಗಳಿಗೆ ಭೇಟಿ; ಪರಿಶೀಲನೆ

ಯುವಮಾರ್ಗ ಸುದ್ದಿ

**ರಾಯಚೂರು ಫೆ,13–** ರಾಯಚೂರು ತಾಲ್ಲೂಕಿನ ಚಿಕ್ಕಸೂಗೂರು ಗ್ರಾಮ ಪಂಚಾಯತಿಯ ವ್ಯಾಪ್ತಿಯ ಇಕೋ ಪಾರ್ಕ್ ಹಾಗೂ ಅಂಗನವಾಡಿ ಕೇಂದ್ರಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕುಮಾರ್ ಕಾಂದೂ ಅವರು ಫೆ.12ರಂದು ಭೇಟಿ ನೀಡಿ ಪರಿಶೀಲನೆ ಮಾಡಿದರು.

ಚಿಕ್ಕಸೂಗೂರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಪ್ರಗತಿ ಹಂತದಲ್ಲಿರುವ ಇಕೋ ಪಾರ್ಕ್ಗೆ ಭೇಟಿ ನೀಡಿ ಕಾಮಗಾರಿಯನ್ನು ಶೀಘ್ರದಲ್ಲೇ ಗುಣಮಟ್ಟದೊಂದಿಗೆ ಪೂರ್ಣಗೊಳಿಸಲು ನಿರ್ಮಿತಿ ಕೇಂದ್ರದ ಜೆಇ ಸಂತೋಷ ಅವರಿಗೆ ಸೂಚನೆ ನೀಡಿದರು.

ನಂತರ ಪಾರ್ಕ್ನಲ್ಲಿರುವ ವೀರಗಲ್ಲುಗಳ ಮಾಹಿತಿ ಸಂಗ್ರಹಿಸುವುದು ಮತ್ತು ಒಂದೆಡೆ ಅವುಗಳನ್ನು ಸುವ್ಯವಸ್ಥಿತವಾಗಿ ಜೋಡಿಸಿ ಸುರಕ್ಷಿತವಾಗಿ ಸಂರಕ್ಷಣೆ ಮಾಡಲು ಸಂಬಂಧಿಸಿದ ಅಧಿಕಾರಿ ಸಿಬ್ಬಂದಿಗೆ ಸೂಚನೆ ನೀಡಿದರು.

ನಂತರ ಅಂಗನವಾಡಿ ಕೇಂದ್ರಕ್ಕೆ ತೆರಳಿದಾಗ ಕೇಂದ್ರವು ಮುಚ್ಚಿರುವುದನ್ನು ಕಂಡು ಸಿಇಓ ಅವರು ಅಸಮಾಧಾನ ವ್ಯಕ್ತಪಡಿಸಿದರು. ಇನ್ನು ಮುಂದೆ ಈ ರೀತಿ ಆಗದಂತೆ ನೋಡಿಕೊಳ್ಳಬೇಕು ಎಂದು ಎಚ್ಚರಿಕೆ ನೀಡಿದರು. ಅಂಗನವಾಡಿಗೆ ದಾಖಲಾಗುವ ಪ್ರತಿ ಮಗುವಿಗೂ ಪೂರ್ಣ ಪ್ರಮಾ ಣದಲ್ಲಿ



ಪೌಷ್ಠಿಕ ಆಹಾರ ಸಿಗುವಂತಾಗಬೇಕು. ಪ್ರತಿದಿನವೂ ಮಕ್ಕಳ ಹಾಜರಾತಿಯನ್ನು ಪರಿಶೀಲಿಸಬೇಕು. ಹಾಜರಾತಿಯ ಪ್ರಮಾಣ ಹೆಚ್ಚಳದ ಬಗ್ಗೆ ಗಮನ ಕೊಡಬೇಕು ಎಂದು ಕಾರ್ಯಕರ್ತೆಯರಿಗೆ ಸಿಇಓ ಅವರು ಸೂಚನೆ ನೀಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ನಡೆಸುತ್ತಿರುವ ಅಂಗನವಾಡಿ ಕೇಂದ್ರಗಳು ಗ್ರಾಮೀಣ ಮತ್ತು ಅವಕಾಶ ವಂಚಿತ ಮಕ್ಕಳ ಶೈಕ್ಷಣಿಕ ಬುನಾದಿಯ ಕೇಂದ್ರಗಳು. ಇಲ್ಲಿ ಮಕ್ಕಳಿಗೆ ನೀಡುವ ಆರೈಕೆ, ಶಿಕ್ಷಣ ಮತ್ತು ಆಹಾರ ಎಲ್ಲವೂ ಮುಖ್ಯವಾಗುತ್ತದೆ. ಪ್ರತಿ ಅಂಗನವಾಡಿ ಕೇಂದ್ರವು ಮಾದರಿಯಾಗಿ ಕಾರ್ಯ ನಿರ್ವಹಿಸುವ ಹಾಗೆ ಅಂಗನವಾಡಿ ಕೇಂದ್ರಗಳ ಬಲವರ್ಧನೆಗೆ ಒತ್ತು ಕೊಡಬೇಕು ಎಂದು ಸಿಇಓ ಅವರು ಇದೆ ವೇಳೆ ಹಾಜರಿದ್ದ ಅಂಗನವಾಡಿ ಕಾರ್ಯಕರ್ತೆಯರಿಗೆ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ರಾಯಚೂರು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಪವಾರ್, ಸಹಾಯಕ ನಿರ್ದೇಶಕ ಶಿವಪ್ಪ, ಚಿಕ್ಕಸುಗೂರು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಸರೋಜಮ್ಮ, ನಿರ್ಮಿತ ಕೇಂದ್ರ ಸಹಾಯಕ ಅಭಿಯಂತರ ಸಂತೋಷ ಸೇರಿದಂತೆ ಇತರರು ಇದ್ದರು.

# ದಿ. ಮಂಜುಳಾ ಸಂಗಮೇಶ ಕಾಯಣ್ಣೋರ್ ಸ್ಮರಣಾರ್ಥ ಪ್ರತಿಭಾ ಪುರಸ್ಕರ

ಯುವಮಾರ್ಗ ಸುದ್ದಿ

**ಮಾನ್ವಿ,ಫೆ.13–** ಪಟ್ಟಣದ ಧ್ಯಾನ ಮಂದಿರದಲ್ಲಿ ಗಾರಿಗೆ ಜಾತ್ರ ಮಹೋತ್ಸವ ಅಂಗವಾಗಿ ದಿ. ಮಂಜುಳಾ ಸಂಗಮೇಶ ಕಾಯಣ್ಣೋರ್ ಸ್ಮರಣಾರ್ಥ ನಡೆದ 2024-25 ನೇ ಸಾಲಿನಲ್ಲಿ ನಡೆದ ಎಸ್.ಎಸ್.ಎಲ್.ಸಿ.ಯಲ್ಲಿ ತಾಲೂಕಿಗೆ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ದತ್ತಿ ಬಹುಮಾನ ಪ್ರಧಾನ ಸಮಾರಂಭದಲ್ಲಿ ಪ್ರತಿಭ ಪುರಸ್ಕಾರವನ್ನು ನೀಡಿ ನೀಲಗಲ್ ಶ್ರೀ ಅಭಿನವ ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳು ಆರ್ಶೀವಾಚನ ನೀಡಿ ತಾಲೂಕಿನಲ್ಲಿನ ಪ್ರತಿಭವಂತ ವಿದ್ಯಾರ್ಥಿಗಳನ್ನು ಗುರುತಿಸಿ ಗೌರವಿಸುವ ಮೂಲಕ ಅವರ ಮುಂದಿನ ಜೀವನ ಉತ್ತಮ ವಾಗಿರಲ್ಲಿ ಎನ್ನುವ ಉದ್ದೇಶದಿಂದ ದಿ. ಮಂಜುಳಾ ಸಂಗಮೇಶ ಕಾಯಣ್ಣೋರ್ ಕುಟುಂಬದವರು ಗಾರಿಗೆ ಜಾತ್ರೆಯ ಅಂಗವಾಗಿ ನಡೆಯುವ ಕಾರ್ಯಕ್ರಮದಲ್ಲಿ ಪ್ರತಿಭಾ ಪುರಸ್ಕಾರವನ್ನು ನೀಡುವ ಮೂಲಕ ಇತರ ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣ ಪಡೆಯುವುದಕ್ಕೆ ಪ್ರೇರಣೆಯನ್ನು ನೀಡುತ್ತಿರುವುದು ಉತ್ತಮ ಕಾರ್ಯವಾಗಿದೆ ಮುಂಬರುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು



ಉತ್ತಮವಾಗಿ ಅಭ್ಯಾಸ ಮಾಡಿ ಉತ್ತಮ ಅಂಕಗಳನ್ನು ಪಡೆಯುವಂತೆ ತಿಳಿಸಿದರು. ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ಕಲ್ಮಠ ಶ್ರೀ ವೀರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸಿದರು, ರಾಜ್ಯ ಮಟ್ಟದಲ್ಲಿ 624 ಅಂಕಗಳನ್ನು ಪಡೆಯುವ ಮೂಲಕ ದ್ವೀತಿಯ ಸ್ಥಾನವನ್ನು ಪಡೆದ ನೀರಾಮಾನ್ವಿ ಅದರ್ಶ ವಿದ್ಯಾಲಯದ ವಿದ್ಯಾರ್ಥಿನಿ ದಿವ್ಯ ರಾಘವೇಂದ್ರ ಹಾಗೂ ಬಲ್ಲಟ್ಟಗಿ ಬಸವೇಶ್ವರ ಪ್ರೌಡಶಾಲೆಯ ವಿದ್ಯಾರ್ಥಿನಿ ಕಾವ್ಯ ಪಾಟೀಲ್ ಪರವಾಗಿ ಪಾಲಕರಿಗೆ ತಲಾ ಐದುಸಾವಿರ ನಗದು ಬಹುಮಾನವನ್ನು ವಿತರಿಸಿ ಸನ್ಮಾನಿಸಿ ಗೌರವಿಸಿದರು.

ಕಾಕತೀಯ ವಿದ್ಯಾ ಸಂಸ್ಥೆಯ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ದಿ. ಮಂಜುಳಾ ಸಂಗಮೇಶ ಕಾಯಣ್ಣೋರ್ ಕುಟುಂಬದ ಸದಸ್ಯರು ಭಾಗವಹಿಸಿದರು ಕಲ್ಮಠ ಕಾಲೇಜಿನ ಪ್ರಾಚಾರ್ಯರಾದ ಎಸ್.ಎಸ್.ಪಾಟೀಲ್, ಶ್ರೀ ರುದ್ರಯ್ಯಸ್ವಾಮಿ ಮದ್ಲಾಪೂರ,ಸೇರಿದಂತೆ ಇನ್ನಿತರರು ಇದ್ದರು.

# ರಾಷ್ಟ್ರೀಯ ಇಂಡಿಯನ್ ಮಿಲಿಟರಿ ಕಾಲೇಜ್‌ನಲ್ಲಿ 8ನೇ ತರಗತಿ ಪ್ರವೇಶ: ಜೂನ್ 07ರಂದು ಪ್ರವೇಶ ಪರೀಕ್ಷೆ

**ರಾಯಚೂರು ಫೆ,13–** ಜನವರಿ 2027ನೇ ಅಧಿವೇಶನಕ್ಕಾಗಿ ಉತ್ತರಾಖಂಡ ರಾಜ್ಯದ ಡೆಹರಾಡೂನಲ್ಲಿರುವ ರಾಷ್ಟ್ರೀಯ ಇಂಡಿಯನ್ ಮಿಲಿಟರಿ ಕಾಲೇಜ್‌ನಲ್ಲಿ 8ನೇ ತರಗತಿಗಾಗಿ ಪ್ರವೇಶ ಬಯಸುವ ಕರ್ನಾಟಕ ರಾಜ್ಯದ ಬಾಲಕ ಮತ್ತು ಬಾಲಕಿಯರಿಗೆ ಅರ್ಹತಾ ಪ್ರವೇಶ ಪರೀಕ್ಷೆಯನ್ನು ಬೆಂಗಳೂರು ಕೇಂದ್ರದಲ್ಲಿ 2026ರ ಜೂನ್ 07ರ ಭಾನುವಾರ ದಂದು ನಡೆಸಲಾಗುವುದು.

ಅಭ್ಯರ್ಥಿಗಳು ಯಾವುದೇ ಸರ್ಕಾರದಿಂದ ಮಾನ್ಯತೆ ಪಡೆದಿರುವ ಯಾವುದೇ ಶಾಲೆಯಲ್ಲಿ 7ನೇ ತರಗತಿಯಲ್ಲಿ ಓದುತ್ತಿರುವ ಅಥವಾ ಉತ್ತೀರ್ಣರಾಗಿರುವ ಹಾಗೂ ದಿನಾಂಕ: 01-01-2027 ರಂತೆ 11ಳಿ ವರ್ಷದಿಂದ 13 ವರ್ಷದೊಳಗಿರುವ (ಅಂದರೆ ದಿನಾಂಕ 02-01-2014 ರಿಂದ 01-07-2015ರೊಳಗೆ ಜನಿಸಿರುವ) ಬಾಲಕರು ಮತ್ತು ಬಾಲಕಿಯರು ಮಾತ್ರ ಸದರಿ ಪ್ರವೇಶ ಪರೀಕ್ಷೆಗೆ ಅರ್ಹರಿರುತ್ತಾರೆ. ಈ ಸಂಸ್ಥೆಯ ಮುಖ್ಯ ಗುರಿ ಯುವಕ ಮತ್ತು ಯುವತಿಯರನ್ನು ದೇಶದ ಸಶಸ್ತ್ರ ಪಡೆಗೆ ಸೇರಲು ಸಿದ್ಧಗೊಳಿಸುವುದು ಹಾಗೂ ಈ ನಿಟ್ಟಿನಲ್ಲಿ ಯುವಕ ಮತ್ತು ಯುವತಿಯರಿಗೆ ಸರ್ವ ರೀತಿಯ ವಿಧ್ಯಾಭ್ಯಾಸ/ತರಬೇತಿ ನೀಡುವುದು.

ಕಾಲೇಜಿನಲ್ಲಿ ವರ್ಷವೊಂದಕ್ಕೆ ಪ್ರಸಕ್ತ ವಿಧ್ಯಾಭ್ಯಾಸ ಶುಲ್ಕ ಸಾಮಾನ್ಯ ವರ್ಗಕ್ಕೆ ರೂ.98650 ಗಳು. ಹಾಗೂ ಎಸ್‌ಸಿ ಎಸ್‌ಟಿ ಗೆ ರೂ 81850 ಗಳಾಗಿರುತ್ತದೆ. ಇದು ಕಾಲ ಕಾಲಕ್ಕೆ ಹೆಚ್ಚಾಗಬಹುದು. ವಿಧ್ಯಾರ್ಥಿ ಮತ್ತು ವಿದ್ಯಾರ್ಥಿನಿಯು ಪ್ರವೇಶ ಸಮಯದಲ್ಲಿ ರೂ.50,000/-ಭದ್ರತಾ ಠೇವಣಿ ನೀಡಬೇಕಾಗುತ್ತದೆ. ಸದರಿ ಮೊತ್ತವನ್ನು ವಿದ್ಯಾರ್ಥಿಯು ಪದವೀಧರನಾದ ಮತ್ತು ವಿಧ್ಯಾರ್ಥಿನಿ ಪದವೀಧರೆಯಾದ ಬಳಿಕ ಹಿಂತಿರುಗಿಸಲಾಗುವುದು.

ಅರ್ಜಿ ನಮೂನೆಗಳನ್ನು ಪಡೆಯುವ ವಿಧಾನ. ಪ್ರಾಸ್ಪೆಕ್ಟಸ್ ಕಮ್ ಅರ್ಜಿ ನಮೂನೆ ಮತ್ತು ಹಳೆಯ ಪ್ರಶ್ನೆ ಪತ್ರಿಕೆಗಳ ಕಿರುಪುಸ್ತಕವನ್ನು ರಾಷ್ಟ್ರೀಯ ಭಾರತೀಯ ಮಿಲಿಟರಿ ಕಾಲೇಜ್, ಘಡಿ ಕ್ಯಾಂಟ್, ಡೆಹ್ರಾಡೂನ್, ಉತ್ತರಾಖಂಡ್, ಪಿನ್ 248003 ಮೂಲಕ ಪಡೆಯಬಹುದು.

ಬೇಡಿಕೆ ಹುಂಡಿ (ಡಿಡಿ) ಕಳುಹಿಸುವ ಮೂಲಕ: ಪ್ರಾಸ್ಪೆಕ್ಟಸ್ ಕಮ್ ಅರ್ಜಿ ನಮೂನೆ ಮತ್ತು ಹಳೆಯ ಪ್ರಶ್ನೆ ಪತ್ರಿಕೆಗಳ ಕಿರುಪುಸ್ತಕವನ್ನು ಸಾಮಾನ್ಯ ಅಭ್ಯರ್ಥಿಗಳಿಗೆ ರೂ.600/-ಗಳ ಮತ್ತು ಎಸ್‌ಸಿ/ಎಸ್‌ಟಿ ಅಭ್ಯರ್ಥಿಗಳಿಗೆ ರೂ.555/-ಗಳ ಬೇಡಿಕೆಯ ಹುಂಡಿಯನ್ನು ಲಿಖಿತ ವಿನಂತಿಯ ಜೊತೆಯಲ್ಲಿ ಹಾಗೂ ಎಸ್‌ಸಿ/ಎಸ್‌ಟಿ ಅಭ್ಯರ್ಥಿಗಳು ಜಾತಿ ಪ್ರಮಾಣಪತ್ರದೊಂದಿಗೆ ಕಳುಹಿಸಬಹುದು.

ದಿ ಕಮೆಂಡಂಟ್ ರಿಮ್ಕ ಫಂಡ್ ಪೇಬಲ್ ಅಟ್ ಎಚ್‌ಡಿಎಫ್‌ಸಿ ಬ್ಯಾಂಕ್ ಬಳ್ಳಾಪುರ ಚೌಕ್ ಡೆಹ್ರಾಡೂನ್ ಬ್ಯಾಂಕ್ ಕೋಡ್ 1399 ಉತ್ತರಾಖಂಡ ( "THE COMMANDANT RIMC FUND" PAYABLE AT HDFC BANK, BALLUPUR CHOWK,DEHRADUN (BANK CODE. 1399), UTTARAKHAND) ಈ ವಿಳಾಸ, ಪಿನ್ ಕೋಡ್ ಮತ್ತು ಸಂಪರ್ಕ ಸಂಖ್ಯೆಯೊಂದಿಗೆ ದೊಡ್ಡ ಅಕ್ಷರಗಳಲ್ಲಿ ಟಯಿಪ್ ಮಾಡಿ ಬರೆಯಬೇಕು. ಕಾನೂನು ಬಾಹಿರ ಅಥವಾ ಅಪೂರ್ಣ ವಿಳಾಸದಿಂದ ಉಂಟಾಗುವ ಪ್ರಾಸ್ಪೆಕ್ಟಸ್‌ನ ಸಾಗಾಣಿಕೆಯಲ್ಲಿ ಯಾವುದೇ ಅಂಚೆ ವಿಳಂಬ ಅಥವಾ ನಷ್ಟಕ್ಕೆ ಆರ್‌ಐಎಮ್‌ಸಿ ಸಂಸ್ಥೆಯು ಜವಾಬ್ದಾರರಾಗಿರುವುದಿಲ್ಲ.

ಭರ್ತಿ ಮಾಡಿದ ನಿಗದಿತ ಅರ್ಜಿ ನಮೂನೆಯನ್ನು ದ್ವಿಪ್ರತಿಯಲ್ಲಿ ಕೆಳಗಿನ ಅಡಕಗಳೊಂದಿಗೆ ದಿನಾಂಕ 05-04-2026 ರೊಳಗಾಗಿ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಫೀಲ್ಡ್ ಮಾರ್ಷಲ್ ಕೆ ಎಮ್ ಕಾರ್ಯಪ್ಪ ಭವನ್, ನಂ.58 ಫೀಲ್ಡ್ ಮಾರ್ಷಲ್ ಕೆ ಎಮ್ ಕಾರ್ಯಪ್ಪ ರಸ್ತೆ, ಬೆಂಗಳೂರು - 25, ಇವರಿಗೆ, ಸಲ್ಲಿಸತಕ್ಕದ್ದು.

ಮುನ್ಸಿಪಾಲಿಟಿ/ ಗ್ರಾಮ ಪಂಚಾಯತ್ ಪ್ರಾಧಿಕಾರ ವತಿಯಿಂದ ಆಂಗ್ಲ ಭಾಷೆಯಲ್ಲಿ ಪಡೆದ ಅಭ್ಯರ್ಥಿಯ ಜನ್ಮ ಪ್ರಮಾಣ ಪತ್ರದ ಧೃಢೀಕೃತ ಪ್ರತಿ. 4 ಪಾಸ್‌ಪೋರ್ಟ್ ಸೈಜಿನ ಭಾವಚಿತ್ರಗಳು.(ಅರ್ಜಿಗಳಲ್ಲಿ ಅಂಟಿಸಿದ ಭಾವಚಿತ್ರವನ್ನು ಸೇರಿಸಿ). ಎಸ್‌ಸಿ/ಎಸ್‌ಟಿ ಅಭ್ಯರ್ಥಿಗಳಾಗಿದ್ದಲ್ಲಿ, ಸಕ್ಷಮ ಪ್ರಾಧಿಕಾರದಿಂದ ನೀಡಿದ ಜಾತಿ ಪ್ರಮಾಣ ಪತ್ರದ ಧೃಢೀಕೃತ ಪ್ರತಿ (ಆಂಗ್ಲ ಭಾಷೆಯಲ್ಲಿ ಇರುವಂತೆ ಮಾತ್ರ). ಪರೀಕ್ಷಾ ಪ್ರವೇಶ ಪತ್ರವನ್ನು ತ್ವರಿತ ಅಂಚೆದ್ವಾರ ರವಾನಿಸಲು ಹೊರ ಜಿಲ್ಲೆಗೆ ರೂ. 56 ಹಾಗೂ ಬೆಂಗಳೂರು ನಗರ ವ್ಯಾಪ್ತಿಗೆ ರೂ.23 ಅಂಚೆ ಚೀಟಿ ಅಂಟಿಸಿದ ಸ್ವವಿಳಾಸ ಲಕೋಟೆ. ಶಾಲಾ ಪ್ರಾಚಾರ್ಯರು, ಮುಖ್ಯೋಪಾಧ್ಯಾಯರಿಂದ ಅಭ್ಯರ್ಥಿಯ ಜನ್ಮ ದಿನಾಂಕ ಮತ್ತು ಓದುತ್ತಿರುವ ತರಗತಿ ಬಗ್ಗೆ ಪಡೆದ ಪ್ರಮಾಣ ಪತ್ರದ ಮೂಲ ಪ್ರತಿ (ಧೃಢೀಕರಿಸಿದ ಅಭ್ಯರ್ಥಿಯ ಭಾವ ಚಿತ್ರದೊಂದಿಗೆ). ಕರ್ನಾಟಕ ರಾಜ್ಯದ ಮೂಲವಾಸಸ್ಥಾನ ಧೃಡೀಕರಣ ಪತ್ರ (ತಹಸೀಲ್ದಾರರಿಂದ). (in English version only). ಆಧಾರ್ ಕಾರ್ಡ್ ಪ್ರತಿ(ಕಡ್ಡಾಯ). ಹೆಚ್ಚಿನ ಮಾಹಿತಿಗಾಗಿ ಇ.ಮೇಲ್: dirdswrblr@gmail.com, ದೂರವಾಣಿ ಸಂಖ್ಯೆ: 080-25589459ಗೆ ಕರೆ ಮಾಡಬಹುದು ಎಂದು ಕಲಬುರಗಿ ಸೈನಿಕ ಕಲ್ಯಾಣ ಮತ್ತು ಪುರ್ನವಸತಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪುಸ್ತಕಗಳ ಮುದ್ರಿಸಲು ಕನಿಷ್ಠ ದರಪಟ್ಟಿಗೆ ಅರ್ಜಿ ಆಹ್ವಾನ

**ರಾಯಚೂರು ಫೆ,13–**ಇಲ್ಲಿನ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿಯಿಂದ 2024-25ನೇ ಸಾಲಿನ ಜಿಲ್ಲಾ ಅಂಕಿ ಅಂಶ ನೋಟದ ಪುಸ್ತಕಗಳು ಹಾಗೂ ಆರ್ಥಿಕ & ಸಾಮಾಜಿಕ ಅವಲೋಕನ ಪುಸ್ತಕಗಳ ಮುದ್ರಿಸಲು ಕನಿಷ್ಠ ದರಪಟ್ಟಿಗೆ ಅರ್ಜಿ ಆಹ್ವಾನಿಸಲಾಗಿದೆ.

ರಾಯಚೂರು ಜಿಲ್ಲೆಯ ಅಂಕಿ ಅಂಶಗಳ ನೋಟದ ಪುಸ್ತಕಗಳು ಹಾಗೂ ಆರ್ಥಿಕ & ಸಾಮಾಜಿಕ ಅವಲೋಕನ ಪುಸ್ತಕಗಳ ಮುದ್ರಿಸುವ ಕರಡು ಪ್ರತಿ ತಯಾರಾಗಿದ್ದು, ಅವುಗಳನ್ನು ಯಾವುದೇ ಅಕ್ಷರದೋಷ, ವ್ಯಾಕರಣ ದೋಷಗಳು ಇರದಂತೆ ಜಿಲ್ಲೆಯ ಅಂಕಿ ಅಂಶಗಳ ನೋಟದ ಪುಸ್ತಕದ ಮುಂಭಾಗ ಮತ್ತು ಹಿಂಭಾಗದ 2 ಪುಟಗಳು ಹಾಗೂ 40 ನಕ್ಷೆಗಳ ಒಳಪುಟಗಳು ಬಣ್ಣಗಳಿಂದ ಮುದ್ರಿತವಾಗಬೇಕು ಹಾಗೂ 60 ಪುಟಗಳ ಆರ್ಥಿಕ & ಸಾಮಾಜಿಕ ಅವಲೋಕನ ಪುಸ್ತಕವನ್ನು (ಮುಂಭಾಗ ಮತ್ತು ಹಿಂಭಾಗದ 2 ಬಣ್ಣದ ಪುಟಗಳು) ಅಂದವಾಗಿ ಮುದ್ರಿಸಿ ಕೊಡಬೇಕಾಗಿದೆ.

ರಾಯಚೂರು ಜಿಲ್ಲೆಯ ಅಂಕಿ ಅಂಶಗಳ ನೋಟದ ಪುಸ್ತಕದ 500 ಪುಸ್ತಕಗಳನ್ನು & ಆರ್ಥಿಕ & ಸಾಮಾಜಿಕ ಅವಲೋಕನ 200 ಪುಸ್ತಕಗಳನ್ನು ಮುದ್ರಣ ಮಾಡುವುದಕ್ಕಾಗಿ ದರಪಟ್ಟಿಯನ್ನು ಮೂರು ಲಕ್ಷ ರೂಪಾಯಿಗಳಿಗೆ ಕರೆಯಲಾಗಿದೆ. ಇಚ್ಛೆಯುಳ್ಳ ಮುದ್ರಣಾಲಯದವರು ಈ ದರಪಟ್ಟಿಗಳನ್ನು ಪ್ರಕಟವಾದ ದಿನಾಂಕದಿಂದ ಒಂದು ವಾರದೊಳಗಾಗಿ ಅಂದರೆ ದಿನಾಂಕ:10-02-2026 ರಿಂದ ದಿನಾಂಕ:18.02.2026 ರ ಸಂಜೆ 5.30 ಗಂಟೆಯೊಳಗಾಗಿ ಈ ಕಾರ್ಯಾಲಯಕ್ಕೆ ಪುಸ್ತಕ ಒಂದಕ್ಕೆ ತಗಲುವ ದರವನ್ನು ನಮೂದಿಸಿ ಕನಿಷ್ಠ ದರಪಟ್ಟಿಯನ್ನು ಮುಚ್ಚಿದ ಲಕೋಟೆಯಲ್ಲಿ ಸಲ್ಲಿಸತಕ್ಕದ್ದು ಮತ್ತು ಈ ಕಛೇರಿಗೆ ಸ್ವೀಕೃತಿಯಾದ ದರಪಟ್ಟಿಗಳನ್ನು ದಿನಾಂಕ: 19.02.2026 ರ ಬೆಳಿಗ್ಗೆ 11ಗಂಟೆಗೆ ಈ ಕಚೇರಿಯಲ್ಲಿ ತೆರೆಯಲಾಗುವುದು ಕಾರಣ ದರಪಟ್ಟಿಗಳನ್ನು ಸಲ್ಲಿಸಿದವರು ಈ ಪತ್ರದಲ್ಲಿ ತಿಳಿಸಿದ ವೇಳೆಯಲ್ಲಿ ಹಾಜರಾಗಬೇಕು. ಅತೀ ಕಡಿಮೆ ದರಪಟ್ಟಿ ಸಲ್ಲಿಸುವ ಮುದ್ರಣಾಕಾರರು ಕಾರ್ಯ ಆದೇಶ ನೀಡಿದ 07 ದಿವಸದೊಳಗಾಗಿ ಯಾವುದೇ ದೋಷವಿಲ್ಲದಂತೆ ಪರಿಶೀಲಿಸಿ, ಪ್ರಕಟಣೆಯಲ್ಲಿ ತಿಳಿಸಿದ ನಿಬಂಧನೆಗಳಿಗೆ ಅನುಗುಣವಾಗಿ ಪುಸ್ತಕಗಳನ್ನು ಮುದ್ರಿಸಿ ಕೊಡತಕ್ಕದ್ದು ಹಾಗೂ ಒಟ್ಟು ಬಿಲ್ಲಿನ ಮೊತ್ತದಲ್ಲಿ ಶೇ.2 ಟಿಡಿಎಸ್‌ನ್ನು ಕಟಾಯಿಸಿ ಹಣವನ್ನು ಪಾವತಿಸಲಾಗುವುದು ಎಂದು ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫೆ.14ರಂದು ಗ್ರಾಮೀಣ ಭಾಗದಲ್ಲಿ ವಿದ್ಯುತ್ ವ್ಯತ್ಯಯ

**ರಾಯಚೂರು ಫೆ,13–** ಜೆಸ್ಕಾಂ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಯ 110/11 ಕೆವಿ ಯರಗೇರಾ ವಿದ್ಯುತ್ ಉಪ-ಕೇಂದ್ರದ ವ್ಯಾಪ್ತಿಯಲ್ಲಿ ಬರುವ ಜಂಬಲದಿನ್ನಿ, ಎಲ್.ಕೆ.ದೊಡ್ಡಿ, ವೈ.ಮಲ್ಲಾಪೂರಿನಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಫೆ.14ರ ಬೆಳಿಗ್ಗೆ 10ರಿಂದ ಸಂಜೆ 5ರವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H